# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 145 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 21–12–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 145 | Title- Code: KARKAN 28269 | Chitradurga | Date: 21-12-2023 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಮತದಾರರ ಪಟ್ಟಿ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮದ ಸೂಪರ್ ಚೆಕ್ 2

ವಿಶೇಷಚೇತನರು ಸಮಾಜದ ಮುಖ್ಯವಾಹಿನಿಗೆ ಬರಬೇಕು: ಟಿ.ರಘುಮೂರ್ತಿ 3

ಭಾರತೀಯ ರೆಡ್‌ಕ್ರಾಸ್: ಚಿತ್ರದುರ್ಗ ಜಿಲ್ಲಾ ಶಾಖೆಗೆ ಬೆಸ್ಟ್ ಡಿಸ್ಟ್ರಿಕ್ಟ್ ಅವಾರ್ಡ್ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಅಮಿತ್ ಷಾ ಭೇಟಿ ಮಾಡಿದ ಸಿಎಂ

## ಕೂಡಲೇ ಉನ್ನತ ಮಟ್ಟದ ಸಭೆ ನಡೆಸಿ, ಪರಿಹಾರ ಬಿಡುಗಡೆ ಮಾಡಲು ಆಗ್ರಹ

» ನವದೆಹಲಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿಯಾಗಿ ಪ್ರಕೃತಿ ವಿಕೋಪ ಕುರಿತಂತೆ ಉನ್ನತ ಮಟ್ಟದ ಸಮಿತಿ ಸಭೆಯನ್ನು ಕೂಡಲೇ ಕರೆದು, ರಾಜ್ಯಕ್ಕೆ ಬರ ಪರಿಹಾರ ಬಿಡುಗಡೆಗೆ ಕ್ರಮ ವಹಿಸುವಂತೆ ಆಗ್ರಹಿಸಿದರು.

ರಾಜ್ಯದಲ್ಲಿ ತೀವ್ರ ಬರ ಪರಿಸ್ಥಿತಿ ತಲೆದೋರಿದ್ದು, 236 ತಾಲ್ಲೂಕುಗಳಲ್ಲಿ 223 ತಾಲ್ಲೂಕುಗಳು ಬರ ಪೀಡಿತವಾಗಿವೆ. ಸುಮಾರು 48.19 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿ ಸಂಭವಿಸಿದೆ. ಇದರಿಂದಾಗಿ ರೈತರು. ಅದರಲ್ಲೂ ಹೆಚ್ಚಿನ ಸಂಖ್ಯೆಯ ಸಣ್ಣ ಮತ್ತು ಅತಿ ಸಣ್ಣ ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ. ರಾಜ್ಯ ಸರ್ಕಾರವು ಎನ್.ಡಿ.ಆರ್.ಎಫ್. ಮಾರ್ಗಸೂಚಿಯನ್ವಯ ಬರ ಪರಿಹಾರ ಬಿಡುಗಡೆಗಾಗಿ ಮೊದಲ ಪ್ರಸ್ತಾವನೆ ಸಲ್ಲಿಸಿ ಮೂರು ತಿಂಗಳು ಕಳೆದಿದೆ. ಆದ್ದರಿಂದ ಕೂಡಲೇ ಉನ್ನತ ಮಟ್ಟದ ಸಮಿತಿ ಸಭೆ ನಡೆಸಿ,,18,177.44 ಕೋಟಿ ರೂ. ಬರ ಪರಿಹಾರ ಬಿಡುಗಡೆ ಮಾಡುವಂತೆ ಮನವಿ ಮಾಡಿದರು.

ಇದರಲ್ಲಿ 4663.12 ಕೋಟಿ ರೂ. ಇನ್‌ಪುಟ್ ಸಬ್ಸಿಡಿ, 12,577.86 ಕೋಟಿ ರೂ. ತುರ್ತು ಪರಿಹಾರ, 566.78 ಕೋಟಿ ರೂ. ಕುಡಿಯುವ ನೀರಿಗಾಗಿ ಹಾಗೂ 363.68 ಕೋಟಿ ರೂ. ಜಾನುವಾರುಗಳ ಸಂರಕ್ಷಣೆಗಾಗಿ ಒದಗಿಸುವಂತೆ ಕೋರಲಾಗಿದೆ.



ಸಣ್ಣ ಮತ್ತು ಅತಿ ಸಣ್ಣ ರೈತರನ್ನು ಪರಿಗಣಿಸುವಾಗ ಕೇಂದ್ರ ಸರ್ಕಾರವು 2015–16ರ ಕೃಷಿ ಗಣತಿಯ ದತ್ತಾಂಶವನ್ನು ಪರಿಗಣಿಸುತ್ತಿದೆ. ಆದರೆ ಇದು 8 ವರ್ಷ ಹಳೆಯ ಮಾಹಿತಿಯಾಗಿದ್ದು, ಆಸ್ತಿ ವಿಭಜನೆ ಮತ್ತಿತರ ಕಾರಣಗಳಿಂದ ಸಣ್ಣ ಮತ್ತು ಅತಿ ಸಣ್ಣ ರೈತರ ಸಂಖ್ಯೆ ಹೆಚ್ಚಾಗಿದ್ದು, 83 ಲಕ್ಷಕ್ಕೂ ಹೆಚ್ಚಿದೆ. ಪಿಎಂ–ಕಿಸಾನ್ ಯೋಜನೆಗೆ ರಾಜ್ಯದ ರೈತರ ದತ್ತಾಂಶ ಸಂಗ್ರಹಿಸುವ ತಂತ್ರಾಂಶ ಫ್ರೂಟ್ಸ್‌ನಲ್ಲಿ ದಾಖಲಿಸಿದ ಮಾಹಿತಿಯನ್ನು ಪರಿಗಣಿಸಲಾಗುತ್ತಿದೆ. ಅಂತೆಯೇ ಬೆಳೆ ಪರಿಹಾರ ವಿತರಣೆಗೂ ಈ ದತ್ತಾಂಶವನ್ನು ಪರಿಗಣಿಸುವಂತೆ ಮುಖ್ಯಮಂತ್ರಿಗಳು ಮನವಿ ಮಾಡಿದರು.

ಬರ ಪರಿಹಾರಕ್ಕಾಗಿ ರಾಜ್ಯದ ಮೊದಲ ಪ್ರಸ್ತಾವನೆಯನ್ನು ಕೇಂದ್ರ ಕೃಷಿ ಸಚಿವಾಲಯಕ್ಕೆ ದಿನಾಂಕ 22–09–2023 ರಂದ ಸಲ್ಲಿಸಲಾಗಿತ್ತು ಭಾರತ ಸರ್ಕಾರದ ಬರ ಅಧ್ಯಯನ ತಂಡವು ಅಕ್ಟೋಬರ್ ತಿಂಗಳ 4 ರಿಂದ 9ರ ನಡುವೆ ಭೇಟಿ ನೀಡಿ, ವರದಿಯನ್ನು ಸಲ್ಲಿಸಿದೆ. ಅದರ ನಂತರ ಇನ್ನೂ 21 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಯಿತು. ಆದ್ದರಿಂದ ಅಕ್ಟೋಬರ್ 20 ರಂದು ಕೇಂದ್ರ ಕೃಷಿ ಸಚಿವಾಲಯಕ್ಕೆ ಎನ್.ಡಿ.ಆರ್.ಎಫ್. ಅಡಿ 17,901.73 ಕೋಟಿ ರೂ. ಪರಿಹಾರ ಒದಗಿಸುವಂತೆ ಪ್ರಸ್ತಾವನೆ ಸಲ್ಲಿಸಲಾಯಿತು. ಇದರಲ್ಲಿ ತುರ್ತು ಪರಿಹಾರದ12,577.86 ಕೋಟಿ ರೂ. ಮೊತ್ತವೂ ಸೇರಿದೆ. ನವೆಂಬರ್ 4 ರಂದು ಹೆಚ್ಚುವರಿಯಾಗಿ 7 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಯಿತು. ಈ ಹಿನ್ನೆಲೆಯಲ್ಲಿ ಸಲ್ಲಿಸಿದ ಪೂರಕ ಮನವಿಯೊಂದಿಗೆ ಕೇಂದ್ರದಿಂದ 18,177.44 ಕೋಟಿ ರೂ. ಪರಿಹಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ಮೊದಲ ಮನವಿ ಸಲ್ಲಿಸಿ ಈಗಾಗಲೇ ಮೂರು ತಿಂಗಳು ಕಳೆದಿದ್ದು, ರೈತರು ಅತ್ಯಂತ ಸಂಕಷ್ಟದ ಪರಿಸ್ಥಿತಿಯಲ್ಲಿದ್ದಾರೆ. ಬೆಳೆ ವಿಫಲವಾಗಿರುವ ಹಿನ್ನೆಲೆಯಲ್ಲಿ ರೈತರಿಗೆ ಇನ್‌ಪುಟ್ ಸಬ್ಸಿಡಿ ನೀಡುವುದು ಅತ್ಯಗತ್ಯವಾಗಿದೆಎಂದುಮುಖ್ಯಮಂತ್ರಿಗಳು ಪ್ರತಿಪಾದಿಸಿದರು.

ಈ ಸಂದರ್ಭದಲ್ಲಿ ಕಂದಾಯ ಸಚಿವ ಕೃಷ್ಣ ಬೈರೇಗೌಡ ಉಪಸ್ಥಿತರಿದ್ದರು.

### ಫಾಸ್ಟ್ ನ್ಯೂಸ್

## ಕರ್ನಾಟಕದಲ್ಲಿ ಕೋವಿಡ್ ಆರ್ಭಟ 22 ಪಾಸಿಟಿವ್, 2 ಸಾವು

» ಬೆಂಗಳೂರು

ರಾಜ್ಯದಲ್ಲಿ ಕೋವಿಡ್ ಆರ್ಭಟ ಮತ್ತೆ ಶುರುವಾಗಿದ್ದು ಜನರು ಆತಂಕಕ್ಕೆ ಒಳಾಗಾಗಿದ್ದಾರೆ. ವಿವಿಧ ಜಿಲ್ಲೆಗಳಲ್ಲಿ ಇಂದು ಒಂದೇ ದಿನ 22 ಮಂದಿಗೆ ಕೊರೋನಾ ಪಾಸಿಟಿವ್ ಎಂಬುದಾಗಿ ದೃಢಪಟ್ಟಿದೆ. ಅಲ್ಲದೇ ಸೋಂಕಿತರಾದಂತ ಇಬ್ಬರು ಚಿಕಿತ್ಸೆ ಫಲಿಸದೇ ಸಾವನ್ನಪ್ಪಿದ್ದಾರೆ.ಈ ಕುರಿತಂತೆ ರಾಜ್ಯ ಆರೋಗ್ಯ ಇಲಾಖೆಯಿಂದ ಮಾಹಿತಿ ಬಿಡುಗಡೆ ಮಾಡಿದ್ದು ಬೆಂಗಳೂರು ನಗರದಲ್ಲಿ 359 ಮಂದಿಯನ್ನು ಪರೀಕ್ಷೆಗೆ ಒಳಪಡಿಸಲಾಗಿತ್ತು. ಇವರಲ್ಲಿ 19 ಜನರಿಗೆ ಕೊರೋನಾ ಪಾಸಿಟಿವ್ ಎಂಬುದು ವರದಿಯಲ್ಲಿ ದೃಢಪಟ್ಟಿದೆ ಎಂದಿದೆ. ಚಿಕ್ಕಬಳ್ಳಾಪುರದಲ್ಲಿ 94 ಮಂದಿಯನ್ನು ಪರೀಕ್ಷೆ ನಡೆಸಲಾಗಿದೆ. ಧಾರವಾಡದಲ್ಲಿ ಐವರನ್ನು ಪರೀಕ್ಷೆಗೆ ಒಳಪಡಿಸಲಾಗಿದ್ದು ಯಾರಿಗೂ ಸೋಂಕು ದೃಢಪಟ್ಟಿಲ್ಲ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇಬ್ಬರನ್ನು ಪರೀಕ್ಷೆಗೆ ಒಳಪಡಿಸಲಾಗಿತ್ತು ಅವರಲ್ಲಿ ಒಬ್ಬರಿಗೆ ಕೋವಿಡ್ ಸೋಂಕು ದೃಢಪಟ್ಟಿದೆ ಎಂದು ತಿಳಿಸಿದೆ. ಬಳ್ಳಾರಿಯಲ್ಲಿ ಜಿಲ್ಲೆಯಲ್ಲಿ ಪರೀಕ್ಷೆಗೆ ಒಳಗಾದಂತ ಇಬ್ಬರಿಗೂ ಕೋವಿಡ್ ದೃಢವಾಗಿದೆ ಎಂದು ವರದಿಯಲ್ಲಿ ತಿಳಿದು ಬಂದಿದೆ. ಹೀಗಾಗಿ ಇಂದು ರಾಜ್ಯಾದ್ಯಂತ 22 ಮಂದಿಗೆ ಕೋವಿಡ್ ಪಾಸಿಟಿವ್ ಎಂಬುದಾಗಿ ಪರೀಕ್ಷೆಯಲ್ಲಿ ದೃಢಪಟ್ಟಿದೆ ಎಂದು ಮಾಹಿತಿ ನೀಡಿದೆ. ಒಟ್ಟಾರೆಯಾಗಿ ಆರ್ ಟಿ ಪಿಸಿಆರ್ ಮೂಲಕ 407 ಪರೀಕ್ಷೆಯನ್ನು ನಡೆಸಲಾಗಿತ್ತು. ಅವರಲ್ಲಿ 19 ಮಂದಿಗೆ ಪಾಸಿಟಿವ್ ಎಂಬುದಾಗಿ ದೃಢಪಟ್ಟಿದೆ. ಇನ್ನೂ ಯಾರ್ಟ್( ಡಿಜಥಿಣ) ಮೂಲಕ 401 ಜನರಿಗೆ ಪರೀಕ್ಷೆ ನಡೆಸಲಾಗಿತ್ತು. ಅವರಲ್ಲಿ ಮೂವರಿಗೆ ಪಾಸಿಟಿವ್ ಬಂದಿದೆ. ಒಟ್ಟಾರೆ 808 ಮಂದಿಯ ಪರೀಕ್ಷೆಯಲ್ಲಿ ಇಂದು 22 ಜನರಿಗೆ ಕೊರೋನಾ ಸೋಂಕು ದೃಢಪಟ್ಟಿದೆ.

## ಜಿಪಂ, ತಾಪಂ ಕ್ಷೇತ್ರ ಗಡಿ ನಿಗದಿ, ಸದಸ್ಯರು, ಮೀಸಲು ಸಂಖ್ಯೆ ಪ್ರಕಟ

» ಬೆಂಗಳೂರು

ಕೊಡಗು ಜಿಲ್ಲೆ ಹೊರತುಪಡಿಸಿ 30 ಜಿಲ್ಲೆಗಳ ಜಿಪಂ ಮತ್ತು 234 ತಾಲ್ಲೂಕು ಪಂಚಾಯಿತಿಗಳ ಸದಸ್ಯರ ಸಂಖ್ಯೆ, ವರ್ಗವಾರು ಮೀಸಲು ಸಂಖ್ಯೆ, ಕ್ಷೇತ್ರಗಳ ಗಡಿ ನಿಗದಿಪಡಿಸಿ ಸರ್ಕಾರ ಗೆಜೆಟ್ ಅಧಿಸೂಚನೆ ಹೊರಡಿಸಿದೆ. 30 ಜಿಲ್ಲಾ ಪಂಚಾಯಿತಿಗಳಲ್ಲಿ 1101 ಸದಸ್ಯರಿದ್ದಾರೆ. 234 ತಾಲ್ಲೂಕು ಪಂಚಾಯಿತಿಗಳಲ್ಲಿ 3621 ಸದಸ್ಯರಿದ್ದಾರೆ. ಕಳೆದ ಸೆಪ್ಟೆಂಬರ್ ನಲ್ಲಿ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗ ಪಂಚಾಯತಿಗಳ ಗಡಿಯ ವ್ಯಾಪ್ತಿ, ಸದಸ್ಯರ ಸಂಖ್ಯೆ ನಿಗದಿಪಡಿಸಿ ಕರಡು ಅಧಿಸೂಚನೆ ಹೊರಡಿಸಿ ಸಾರ್ವಜನಿಕರಿಂದ ಆಕ್ಷೇಪಣೆ, ಸಲಹೆ, ಸೂಚನೆ ಆಹ್ವಾನಿಸಿತ್ತು. ಜಿಲ್ಲಾವಾರು ಆಕ್ಷೇಪಣೆ ಆಹ್ವಾನಿಸಿ ಸದಸ್ಯರ ಸಂಖ್ಯೆಯನ್ನು ನಿರ್ಧರಿಸಿ ಸರ್ಕಾರಕ್ಕೆ ಶಿಫಾರಸು ಮಾಡಿದ್ದು, ಈಗ ಗೆಜೆಟ್ ಅಧಿಸೂಚನೆ ಹೊರಡಿಸಲಾಗಿದೆ. ಮಹಿಳೆಯರಿಗೆ ಶೇಕಡ 50ರಷ್ಟು ಮೀಸಲಾತಿ ಕಲ್ಪಿಸಲಾಗಿದೆ. ಇನ್ನು ತಿಂಗಳೊಳಗೆ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಕ್ಷೇತ್ರ ಮೀಸಲಾತಿ ಪ್ರಕ್ರಿಯೆ ಪೂರ್ಣಗೊಳಿಸುವುದಾಗಿ ಹೈಕೋರ್ಟ್ ಗೆ ಸರ್ಕಾರ ಭರವಸೆ ನೀಡಿದೆ.

### ಪ್ರಮುಖ ಸುದ್ದಿ

## ಮಾಜಿ ಶಾಸಕ ಮಾಡಾಳ್ ವಿರೂಪಾಕ್ಷಪ್ಪ ಪ್ರಕರಣ ರದ್ದುಗೊಳಿಸಿ ಹೈಕೋರ್ಟ್ ಆದೇಶ

» ಬೆಂಗಳೂರು

ಕರ್ನಾಟಕ ಸಾಬೂನು ಮತ್ತು ಮಾರ್ಜಕ ಕಾರ್ಖಾನೆ (ಕೆಎಸ್ ಡಿಎಲ್) ಟೆಂಡರ್‌ಗಾಗಿ ಲಂಚ ಪಡೆದ ಆರೋಪ ಮಾಜಿ ಶಾಸಕ ಮಾಡಾಳ್ ವಿರೂಪಾಕ್ಷಪ್ಪ ವಿರುದ್ಧದ ಪ್ರಕರಣ ರದ್ದುಗೊಳಿಸಿ ಹೈಕೋರ್ಟ್ ಆದೇಶ ಹೊರಡಿಸಿದೆ. ಭ್ರಷ್ಟಾಚಾರ ತಡೆ ಕಾಯ್ದೆ ಸೆಕ್ಷನ್ 17 ಎ ಪ್ರಕಾರ ಪ್ರಕ್ರಿಯೆ ಪಾಲಿಸಿಲ್ಲ ಎಂದು ಮಾಡಾಳ್ ಪರ ಹಿರಿಯ ವಕೀಲ ಪ್ರಭುಲಿಂಗ್ ನಾವದಗಿ ವಾದ ಮಂಡಿಸಿದ್ದರು.ವಕೀಲರವಾದ ಪುರಸ್ಕರಿಸಿದ ಹೈಕೋರ್ಟ್ , ಪ್ರಕರಣ ರದ್ದುಗೊಳಿಸಿ ಆದೇಶ ಹೊರಡಿಸಿದೆ.



ಇನ್ನು ಈ ಪ್ರಕರಣದಲ್ಲಿ ಕೇವಲ ಮಾಡಾಳು ವಿರೂಪಾಕ್ಷಪ್ಪ ವಿರುದ್ಧ ದಾಖಲಾಗಿದ್ದ ಕೇಸ್ ಮಾತ್ರ ರದ್ದುಗೊಳಿಸಿ ಹೈಕೋರ್ಟ್ ನ್ಯಾಯಮೂರ್ತಿ ನಾಗಪ್ರಸನ್ನ ಅವರ ಪೀಠ ಆದೇಶ ಹೊರಡಿಸಿದೆ. ಆದರೆ, ಮಾಡಳು ವಿರೂಪಾಕ್ಷಪ್ಪ ಪುತ್ರ ಸೇರಿ ಇತರ ಆರೋಪಿಗಳ ವಿರುದ್ಧದ ಲೋಕಾಯುಕ್ತ ಪ್ರಕರಣದ ಕೇಸ್ ಮುಂದುವರೆಯಲಿದೆ.

ಲಂಚ ಕೇಸ್‌ನಲ್ಲಿ ಸಿಲುಕಿ ನರಳಾಡುತ್ತಿದ್ದ ಮಾಡಾಳ್ ವಿರೂಪಾಕ್ಷಪ್ಪಗೆ ಬಿಗ್ ರಿಲೀಫ್ ಸಿಕ್ಕಂತಾಗಿದೆ. ಅಲ್ಲದೇ ಪ್ರಕರಣದಿಂದಾಗಿ ಬಿಜೆಪಿಯಿಂದ ಉಚ್ಚಾಟನೆಗೊಂಡಿದ್ದ ಮಾಡಾಳ್ ಮತ್ತೆ ರಾಜಕೀಯದತ್ತ ಮುಖ ಮಾಡುತ್ತಾರಾ ಎನ್ನುವುದೇ ಮುಂದಿರುವ ಕುತೂಹಲ.

**ಪ್ರಕರಣ ಹಿನ್ನೆಲೆ:** ಮಾರ್ಚ್ 2ರಂದು ಶಾಸಕ ಮಾಡಾಳ್ ವಿರುಪಾಕ್ಷಪ್ಪ ಅವರ ಪುತ್ರ ಬೆಂಗಳೂರು ಜಲಮಂಡಳಿಯ ಚೀಫ್ ಅಕೌಂಟಿಂಗ್ ಆಫೀಸರ್ ಮಾಡಾಳ್ ಪ್ರಶಾಂತ್ ಅವರು 40 ಲಕ್ಷ ರೂ. ಹಣವನ್ನು ಪಡೆಯುವಾಗ ಲೋಕಾಯುಕ್ತರ ಬಲೆಗೆ ಬಿದ್ದಿದ್ದರು. ಈ ವೇಳೆ ಪ್ರಶಾಂತ್ ಅವರಿಗೆ ಹಣ ಕೊಡಲು ಬಂದ ವ್ಯಕ್ತಿಗಳು ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ (ಕೆಎಸ್‌ಡಿಎಲ್) ಅಧ್ಯಕ್ಷರಾಗಿದ್ದ ಮಾಡಾಳ್ ವಿರುಪಾಕ್ಷಪ್ಪ ಅವರಿಗೆ ಸಂಬಂಧಪಟ್ಟ ಹಣವಾಗಿದೆ ಎಂದು ಹೇಳಿದ್ದರು. ಬಳಿಕ ಲೋಕಾಯುಕ್ತ ಅಧಿಕಾರಿಗಳು ವಿರುಪಾಕ್ಷಪ್ಪ ಹಾಗೂ ಅವರ ಪುತ್ರ ಪ್ರಶಾಂತ್ ನಿವಾಸದ ಮೇಲೆ ದಾಳಿ ಮಾಡಿತ್ತು.

ಬೆಂಗಳೂರಿನ ಮನೆ, ಕಚೇರಿ, ಚನ್ನೇಶಪುರ ಗ್ರಾಮದ ಮನೆಯಲ್ಲಿ ಕಾರ್ಯಚರಣೆ ನಡೆಸಿತ್ತು, ಈ ವೇಳೆ ಕೋಟಿ ಕೋಟಿ ಹಣ, ಚಿನ್ನ, ಅಪಾರ ಪ್ರಮಾಣದ ಆಸ್ತಿ ಪತ್ರಗಳು ಪತ್ತೆಯಾಗಿದ್ದವು.

ಈ ಪ್ರಕರಣದಲ್ಲಿ ಲೋಕಾಯುಕ್ತ ಪೊಲೀಸರಿಗೆ 6 ದಿನಗಳ ಕಾಲ ಸಿಗದೇ ಕಣ್ಮರೆಸಿಕೊಮಡಿದ್ದ ಮಾಡಾಳ್ ವಿರುಪಾಕ್ಷಪ್ಪ ಹೈಕೋರ್ಟ್‌ನಿಂದ ಮಧ್ಯಂತರ ನಿರೀಕ್ಷಣಾ ಜಾಮೀನು ಪಡೆದು ಲೋಕಾಯುಕ್ತ ಪೊಲೀಸರ ಮುಂದೆ ಹಾಜರಾಗಿದ್ದರು. ಆದರೆ ಲೋಯುಕ್ತರ ಪ್ರಶ್ನೆಗಳಿಗೆ ಸರಿಯಾದ ಉತ್ತರಗಳನ್ನು ನೀಡಿಲ್ಲ ಎಂದು ತಿಳಿದುಬಂದಿತ್ತು.




## ಫಾಸ್ಟ್ ನ್ಯೂಸ್

### ಜಿಲ್ಲಾ ಮಟ್ಟದ ಜನತಾ ದರ್ಶನ ಡಿ.27ಕ್ಕೆ ಮುಂದೂಡಿಕೆ

» **ಚಿತ್ರದುರ್ಗ**

ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ನೇತೃತ್ವದಲ್ಲಿ ಡಿಸೆಂಬರ್ 22ರಂದು ಚಳ್ಳಕೆರೆಯಲ್ಲಿ ಏರ್ಪಡಿಸಲು ಉದ್ದೇಶಿಸಲಾಗಿದ್ದ ಜಿಲ್ಲಾ ಮಟ್ಟದ ಜನತಾದರ್ಶನವನ್ನು ಡಿ. 27 ಕ್ಕೆ ಮುಂದೂಡಲಾಗಿದ್ದು, ಅಂದು ಬೆಳಿಗ್ಗೆ 10.30 ಗಂಟೆಗೆ ಚಳ್ಳಕೆರೆಯ ಶ್ರೀ ಗುರು ರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಏರ್ಪಡಿಸಲಾಗಿದೆ. ಸಾರ್ವಜನಿಕರ ಕುಂದು ಕೊರತೆಗಳನ್ನು ಸ್ಥಳೀಯ ಮಟ್ಟದಲ್ಲಿ ನಿವಾರಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ಸೂಚನೆಯಂತೆ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಪ್ರತಿ ತಿಂಗಳು ಜಿಲ್ಲಾಮಟ್ಟದ ಜನತಾ ದರ್ಶನ ಏರ್ಪಡಿಸಲಾಗುತ್ತಿದ್ದು, ಈ ಬಾರಿಯ ಜಿಲ್ಲಾ ಮಟ್ಟದ ಜನತಾ ದರ್ಶನ ಇದೇ ಡಿಸೆಂಬರ್ 27 ರಂದು ಬೆಳಿಗ್ಗೆ 10.30 ಕ್ಕೆ ಚಳ್ಳಕೆರೆ ಪಟ್ಟಣದ ಶ್ರೀ ಗುರು ರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಲಾಗಿದೆ.
ಜಿಲ್ಲಾಮಟ್ಟದ ಎಲ್ಲ ಅಧಿಕಾರಿಗಳು, ಜನಪ್ರತಿನಿಧಿಗಳು ಜನತಾ ದರ್ಶನದಲ್ಲಿ ಉಪಸ್ಥಿತರಿರುವರು. ಸಾರ್ವಜನಿಕರಿಂದ ಅರ್ಜಿಗಳನ್ನು ಪಡೆದು ಸ್ವೀಕೃತಿ ನೀಡುವ ಸಲುವಾಗಿ ಸಮರ್ಪಕ ರೀತಿಯಲ್ಲಿ ಕೌಂಟರ್‌ಗಳ ವ್ಯವಸ್ಥೆ ಮಾಡಲಾಗುವುದು. ಸಾರ್ವಜನಿಕರು ತಮ್ಮ ಕುಂದುಕೊರತೆ ಕುರಿತ ಅಹವಾಲು, ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ತಿಳಿಸಿದ್ದಾರೆ.

### ಪುರಸ್ಕಾರಕ್ಕೆ ಅರ್ಜಿ ಆಹ್ವಾನ

» **ದಾವಣಗೆರೆ**

ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯಿಂದ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಪ್ರೊ. ಯು.ಆರ್. ರಾವ್ ಪುರಸ್ಕಾರ, ಪದವಿ ವಿದ್ಯಾರ್ಥಿಗಳಿಗೆ ಪ್ರೊ. ಎಸ್.ಕೆ. ಶಿವಕುಮಾರ್ ಪುರಸ್ಕಾರ ಹಾಗೂ ಜನಸಾಮಾನ್ಯರು ಮತ್ತು ಭೋದಕರಿಗೆ ಕೆ.ಎಸ್.ಟಿ.ಎ. ಪುರಸ್ಕಾರಕ್ಕಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

### ಅನಾಮಧೇಯ ಶವ ಪತ್ತೆ: ವಾರಸುದಾರರ ಪತ್ತೆಗೆ ಮನವಿ

» **ಚಿತ್ರದುರ್ಗ**

ಹೊಳಲ್ಕೆರೆ ತಾಲ್ಲೂಕಿನ ಮಲ್ಲಾಡಿಹಳ್ಳಿ ಗೇಟ್‌ಗಳ ಮಧ್ಯ ಸೇತುವೆ ಹತ್ತಿರ ಎನ್‌ಹೆಚ್-369 ರಸ್ತೆಯಲ್ಲಿ ಸುಮಾರು 30-35 ವರ್ಷದ ಹೆಂಗಸಿನ ಅನಾಮಧೇಯ ಶವ ಪತ್ತೆಯಾಗಿರುವ ಪ್ರಕರಣ 2023ರ ಡಿ.17 ರಂದು ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.ಸುಮಾರು 30-35ವರ್ಷ, ಸುಮಾರು 5 ಅಡಿ ಎತ್ತರ, ಸಾಧಾರಣ ಮೈಕಟ್ಟು, ದುಂಡು ಮುಖ, ಗೋಧಿ ಮೈಬಣ್ಣ, ತಲೆಯಲ್ಲಿ ಸುಮಾರು 12 ಇಂಚು ಕಪ್ಪು ಕೂದಲು ಹೊಂದಿರುವ ಮೃತ ಮಹಿಳೆ ಮೈಮೇಲೆ ಬಣ್ಣದ ಹೂಗಳುಳ್ಳ ನೈಟಿ ಧರಿಸಿದ್ದಾಳೆ. ಈ ಹೆಂಗಸಿನ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಹೊಳಲ್ಕೆರೆ ಪೊಲೀಸ್ ಠಾಣೆ 08191-275233, ಹೊಳಲ್ಕೆರೆ ವೃತ್ತ ನಿರೀಕ್ಷಕರ ಕಚೇರಿ 08191-275376, ಚಿತ್ರದುರ್ಗ ಪೊಲೀಸ್ ಉಪಾಧೀಕ್ಷಕರ ಕಚೇರಿ 08194-2224304, ಚಿತ್ರದುರ್ಗ ಜಿಲ್ಲಾ ಕಂಟ್ರೋಲ್ ರೂಂ 08194-222782 ದೂರವಾಣಿ ಸಂಖ್ಯೆಗೆ ಸಂಪರ್ಕಿಸಬಹುದು.

### ವಾರಸುದಾರರ ಪತ್ತೆಗೆ ಮನವಿ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಜಿಲ್ಲಾ ಆಸ್ಪತ್ರೆಯ ಪಾರ್ಕ್ ಹಿಂಭಾಗ ಸುಮಾರು 35 ರಿಂದ 40 ವರ್ಷದ ಗಂಡಸಿನ ಅನಾಮಧೇಯ ಶವ ಪತ್ತೆಯಾಗಿರುವ ಪ್ರಕರಣ 2023ರ ಡಿ.15 ರಂದು ಚಿತ್ರದುರ್ಗ ನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.ಸುಮಾರು 35-40 ವರ್ಷ, ಸುಮಾರು 5.6 ಅಡಿ ಎತ್ತರ, ಸಾಧಾರಣ ಮೈಕಟ್ಟು, ದುಂಡು ಮುಖ, ತಲೆಯಲ್ಲಿ ಸುಮಾರು 2 ಇಂಚು ಕಪ್ಪು ಕೂದಲು, ಕುರುಚಲು ಗಡ್ಡ, ವ್ಯಕ್ತಿಯ ಮೈಮೇಲೆ ಕ್ರೀಮ್‌ಬಣ್ಣದ ಸಣ್ಣ ಚೆಕ್ಸ್‌ವುಳ್ಳ ಅರ್ಧತೋಳಿನ ಶರ್ಟ್, ನೀಲಿ ಬಣ್ಣದ ನೈಟ್ ಪ್ಯಾಂಟ್ ಧರಿಸಿದ್ದಾನೆ. ಮೃತ ಅನಾಮಧೇಯ ವ್ಯಕ್ತಿಯ ವಿಳಾಸ ಪತ್ತೆಯಾಗದ ಕಾರಣ ಜಿಲ್ಲಾ ಆಸ್ಪತ್ರೆಯ ಶವಗಾರದಲ್ಲಿ ಇಡಲಾಗಿದೆ.

### ವಿದ್ಯುತ್ ವ್ಯತ್ಯಯ

» **ದಾವಣಗೆರೆ**

ಜಲಸಿರಿ ವತಿಯಿಂದ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ನಗರದ 66/11 ಕೆ.ವಿ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಡುವ ಮೌನೇಶ್ವರ ಫೀಡರ್ ವ್ಯಾಪ್ತಿಯ ಹೆಚ್.ಕೆ.ಆರ್ ಸರ್ಕಲ್, ಕೆ.ಇ.ಬಿ ಕಾಲೋನಿ, ನಿಟುವಳ್ಳಿ ಹೊಸ ಬಡಾವಣೆ, ಮೌನೇಶ್ವರ ಬಡಾವಣೆ ಹಾಗೂ ಇ.ಎಸ್.ಐ .ಆಸ್ಪತ್ರೆ, ಕೆ.ಟಿ.ಜೆ ನಗರ ಪೋಲಿಸ್ ಠಾಣೆ ಮತ್ತು ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ಡಿ.21 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

---

**ತಾಲ್ಲೂಕು ನಾಯಕ ಸಮಾಜದ ಅಧ್ಯಕ್ಷ ಬಿ.ಕಾಂತರಾಜ್ ಮಾಹಿತಿ**

# 23 ರಿಂದ ಮಿಂಚೇರಿ ಮಹೋತ್ಸವ

» **ಚಿತ್ರದುರ್ಗ**

ಬುಡಕಟ್ಟು ಜನಾಂಗದ ಜನಕ, ಗೋರಕ್ಷಕ, ದಾಸರ ದಂಡಿನ ಒಡೆಯ ಶ್ರೀ ಗಾದ್ರಿಪಾಲನಾಯಕ ಸ್ವಾಮಿಯ ಸಾಲು ಎತ್ತಿನ ಗಾಡಿಗಳ 2023ರ ಮಿಂಚೇರಿ ಮಹೋತ್ಸವವೂ ಡಿ.23 ರಿಂದ 28ರವರೆಗೆ ನಡೆಯಲಿದೆ ಎಂದು ನಗರಸಭೆ ಮಾಜಿ ಅಧ್ಯಕ್ಷ, ತಾಲ್ಲೂಕು ನಾಯಕ ಸಮಾಜದ ಅಧ್ಯಕ್ಷ ಬಿ.ಕಾಂತರಾಜ್ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಲವಾರು ವರ್ಷಗಳಿಂದ ಈ ಮಿಂಚೇರಿ ಉತ್ಸವವೂ ನಡೆಯುತ್ತಾ ಬಂದಿದೆ ಇದು ಬುಡಕಟ್ಟು ಜನಾಂಗದ ಸಂಸ್ಕೃತಿಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಬಚ್ಚೋರನಹಟ್ಟಿಯಲ್ಲಿ ಡಿ. 23 ರಂದು ಶನಿವಾರ ಬೆಳಿಗ್ಗೆ ದೇವರು ಮುತ್ತಯ್ಯಗಳ ಆಗಮನ 7 ಗಂಟೆಗೆ ದೇವರ ಮಜ್ಜನ ಬಾವಿಯಲ್ಲಿ ಗಂಗಾಪೂಜೆ, 11.30ರಿಂದ ಮಿಂಚೇರಿ ಯಾತ್ರಾ ಮಹೋತ್ಸವಕ್ಕೆ ಚಾಲನೆಯನ್ನು ನೀಡಲಾಗುವುದು ಎಂದರು.

ಅಂದು ಬಚ್ಚಬೋರಯ್ಯಹಟ್ಟಿಯಿಂದ ನಿರ್ಗಮಿಸಿ, ಕಕ್ಕಲು ಬೆಂಚಿಲ್ಲಿ ಪೂಜೆಯನ್ನು ಸಲ್ಲಿಸಿ ಸಂಜೆ 7 ಗಂಟೆಗೆ ಕ್ಯಾಸಪುರದ ಬಯಲಿನಲ್ಲಿ ಬೀಡು ಬೀಡಲಾಗುವುದು. ಡಿ.24 ರಂದು ಯಾತ್ರೆ ಮುಂದುವರೆದು



ಮಧ್ಯಾಹ್ನ 12ಕ್ಕೆ ಸಿರಿಗೆರೆ ಡಿ.ಮದಕರಿಪುರ ವರತಿನಾಯಕ ಕರೆಯ ದಂಡೆಯಲ್ಲಿ ವಿಶ್ರಾಂತಿ ಪಡೆದು, ಅಲ್ಲಿಂದ ಮಿಚೇರಿಗೆ ಪಯಣ ಸಂಜೆ 5 ಗಂಟೆಗೆ ಸ್ವಾಮಿಯ ಮೀಸಲು ಹಾಲಿನ ಕಂಬಿಯ ಪೂಜೆ ನಡೆಯಲಿದೆ ಎಂದು ತಿಳಿಸಿದರು.

ಡಿ.25 ರಂದು ಬೆಳಿಗ್ಗೆ 5 ಕ್ಕೆ ಹುಲಿರಾಯನ ಮತ್ತು ನಾಯಕರ ಸಮಾದಿಗೆ ಪೂಜೆ, ಮದ್ಯಾಹ್ನ 2ಕ್ಕೆ ಸ್ವಾಮಿಯ ಸನ್ನಿಧಿಯಲ್ಲಿ ಬಸವಂತರಿಗೆ ಹಾಗೂ ಚೌಕು ಮಣಿವು ಕಾರ್ಯಕ್ರಮ, ಸಂಜೆ 4ಕ್ಕೆ ಕಣಿವೆ ಮಾರಮ್ಮ ಮಲ್ಲಿಯಮ್ಮ ಹಾಗೂ ಕೊಲ್ಲಪುರದಮ್ಮನವರ ಗಂಗಾಪೂಜೆ, .ಡಿ.26ರಂದು ಬೆಳಿಗ್ಗೆ 7ಕ್ಕೆ ಭಿಕ್ಷೆ ಸ್ವೀಕಾರ, 11ಕ್ಕೆ ಸ್ವಾಮಿಯ ಸನ್ನಿಧಿಯಲ್ಲಿ ಪ್ರಸಾದ ಸ್ವೀಕಾರ, ಮದ್ಯಾಹ್ನ 2ಕ್ಕೆ ಮೀಚೇರಿಯಿಂದ ಸುಕ್ಷೇತ್ರದಿಂದ ನಿರ್ಗಮನ, ರಾತ್ರಿ 7ಕ್ಕೆ ಕಡ್ಲೇಗುದ್ದು ಬಳಿಯ ಸಿದ್ದರ ಗುಂಡಿಗೆ ಆಗಮನವಾಗಲಿದೆ ಎಂದರು.

ಡಿ. 27 ರಂದು ಕ್ಯಾಸಾಪುರದ ಬಳಿಯ ಜನಿಗಿ ಹಳ್ಳಕ್ಕೆ ಗಂಗಾಪೂಜೆ, ಮಧ್ಯಾಹ್ನ 2ಕ್ಕೆ ಚಿತ್ರದುರ್ಗಕ್ಕೆ ಮಿಂಚೇರಿ ಯಾತ್ರೆಯ ಆಗಮನ ರಾಜಾ ಬೀದಿಗಳಲ್ಲಿ ಮೆರವಣಿಗೆ, ಸಂಜೆ ಕಕ್ಕಲು ಬೆಂಚಿಯಲ್ಲಿ ಬೀಡು ಬಿಡಲಾಗುವುದು.

ಡಿ.28ರಂದು ಸಂಜೆ 7ಕ್ಕೆ ಗ್ರಾಮದ ಹೊಸ್ತಿಲು ಪೂಜೆಯೊಂದಿಗೆ ಸ್ವಸ್ಥಾನಕ್ಕೆ ಮರಳಲಾಗುವುದು, ಗುರು-ಹಿರಿಯರೊಂದಿಗೆ ದೇವರು ಮುತ್ತಯ್ಯಗಳ ಬೀಳ್ಕೂಡುಗೆ ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದರು.

ಡಿ.23 ರಂದು ಬೆಳಿಗ್ಗೆ 10 ಗಂಟೆಗೆ ಮಿಂಚೇರಿ ಉದ್ಘಾಟನಾ ಮಹೋತ್ಸವ ಕಾರ್ಯಕ್ರಮದಲ್ಲಿ ಶಾಸಕರಾದ ಕೆ.ಸಿ.ವಿರೇಂದ್ರ ಎಂ.ಚಂದ್ರಪ್ಪ ಮಾಜಿ ಶಾಸಕರಾದ ಎಸ್.ಕೆ.ಬಸವರಾಜನ್, ಜಿ.ಎಚ್.ತಿಪ್ಪಾರೆಡ್ಡಿ, ಜಿಲ್ಲಾಧಿಕಾರಿ ದಿವ್ಯಪ್ರಭು, ಜಿಲ್ಲಾ ರಕ್ಷಣಾಧಿಕಾರಿ ಧರ್ಮೆಂದ್ರ ಕುಮಾರ್ ಮೀನಾ, ಜಿ.ಪಂ. ಸಿಇಒ ಸೋಮಶೇಖರ್, ಸೇರಿದಂತೆ ಇತರರು ಭಾಗವಹಿಸಲಿದ್ದಾರೆ.

ಡಿ. 27ರಂದು ಚಿತ್ರದುರ್ಗವನ್ನು ಪ್ರವೇಶ ಮಾಡಲಿರುವ ಮಿಂಚೇರಿ ಯಾತ್ರೆಯಲ್ಲಿ ವಾಲ್ಮೀಕಿ ಗುರುಪೀಠದ ಶ್ರೀ ವಾಲ್ಮೀಕಿ ಪ್ರಸನ್ನಾನಂದ ಶ್ರೀಗಳು, ಬಸವ ಪ್ರಭು ಶ್ರೀಗಳು, ಬಸವಮೂರ್ತಿ ಮಾದಾರ ಚನ್ನಯ್ಯ ಶ್ರೀಗಳು, ಯಾದಾವನಂದ ಶ್ರೀಗಳು, ಶಿವಲಿಂಗಾನಂದ ಶ್ರೀಗಳು, ಇಮ್ಮಡಿ ಸಿದ್ದರಾಮೇಶ್ವರ ಶ್ರೀಗಳು, ಕೇತೇಶ್ವರ ಶ್ರೀಗಳು, ಬಸವ ಮಾಚಿದೇವ ಶ್ರೀಗಳು, ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್, ಬಿ.ನಾಗೇಂದ್ರ, ಜಿಲ್ಲೆಯ ಚುನಾಯಿತ ಪ್ರತಿನಿಧಿಗಳು ಮಾಜಿ ಶಾಸಕರುಗಳು, ಅಧಿಕಾರಿಗಳು, ಭಾಗವಹಿಸಲಿದ್ದಾರೆ.

ಈ ಯಾತ್ರೆಯೂ ಸೀಬಾರ, ಗೂಳಯ್ಯನಹಟ್ಟಿ, ಕ್ಯಾಸಪುರ, ಕಡ್ಲೇಗುದ್ದು, ಕೋಣನೂರು, ಚುಕ್ಕೇನಹಳ್ಳಿ, ಸಿರಿಗೆರೆ, ದಡ್ಡಿಗೇನಹಾಳ್, ಮದಕರಿಪುರ, ಮೀಂಚೇರಿಪುರ ತಲುಪಲಿದೆ.

ಗೋಷ್ಟಿಯಲ್ಲಿ ಜಿಲ್ಲಾ ನಾಯಕ ಸಮಾಜದ ಅಧ್ಯಕ್ಷರಾದ ಹೆಚ್.ಜೆ.ಕೃಷ್ಣಮೂರ್ತಿ, ಗೋಪಾಲಸ್ವಾಮಿ ನಾಯಕ್, ಬೋರಯ್ಯ, ನೆಲಗೆತನ ಬೋರಯ್ಯ, ಬಿ.ಬೋರಯ್ಯ, ಸಣ್ಣ ಬೋರಯ್ಯ, ರಮೇಶ್, ಬಸವರಾಜು, ಪಾಲಯ್ಯ, ಪ್ರಹ್ಲಾದ್, ಪಾಪಣ್ಣ, ಮೂರ್ತಿ, ದೀಪು, ಕಾಟಹಳ್ಳಿ ಕರಿಯಣ್ಣ, ಸಣ್ಣ ಹನುಮಂತಸ್ವಾಮಿ, ಸೇರಿದಂತೆ ಇತರರು ಉಪಸ್ಥಿತರಿದ್ದರು.

---

# ಮತದಾರರ ಪಟ್ಟಿ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮದ ಸೂಪರ್ ಚೆಕ್

» **ಚಿತ್ರದುರ್ಗ**

ಜಿಲ್ಲೆಯಲ್ಲಿ ಜರುಗುತ್ತಿರುವ ಮತದಾರರ ಪಟ್ಟಿ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮದ ಬಗ್ಗೆ ಚುನಾವಣಾ ಆಯೋಗದ ಸೂಚನೆಯಂತೆ ಸೂಪರ್ ಚೆಕ್ ನಡೆಸುವ ಕಾರ್ಯಕ್ರಮದಡಿ ಚಿತ್ರದುರ್ಗ ಜಿಲ್ಲಾ ಮತದಾರರ ಪಟ್ಟಿ ವೀಕ್ಷಕರು ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ ಸರ್ಕಾರದ ಕಾರ್ಯದರ್ಶಿ ಡಾ.ಶಮ್ಲಾ ಇಕ್ಬಾಲ್ ಬುಧವಾರ ನಗರದ ವಿವಿಧ ಮತಗಟ್ಟೆಗಳಿಗೆ ತೆರಳಿ ವೀಕ್ಷಣೆ ನಡೆಸಿದರು. ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಚುನಾವಣಾ ಆಯೋಗದ ನಿರ್ದೇಶನದನ್ವಯ ಜಿಲ್ಲೆಯ ಮತದಾರರ ಪಟ್ಟಿ ವೀಕ್ಷಕರಾದ ಡಾ. ಶಮ್ಲಾ ಇಕ್ಬಾಲ್ ಅವರು ಜಿಲ್ಲೆಗೆ ಭೇಟಿ ನೀಡಿ 2ನೆ ಹಂತದ ಪರಿಶೀಲನೆ ಕಾರ್ಯ ಕೈಗೊಂಡರು. ಇದರ ಅಂಗವಾಗಿ, ನಗರದ ಸರಸ್ವತಿ ಕಾನೂನು ಕಾಲೇಜು, ಜೆ.ಜೆ. ಹಟ್ಟಿ, ರೈಲ್ವೇ ನಿಲ್ದಾಣ ಬಳಿಯ ಸದಾನಂದಯ್ಯ ಬಡಾವಣೆ, ನೀಲಕಂಠೇಶ್ವರ ಬಡಾವಣೆ, ಮಲ್ಲಾಪುರ ಸರ್ಕಾರಿ ಪ್ರಾಥಮಿಕ ಪಾಠ ಶಾಲೆಯ ಮತಗಟ್ಟೆಗಳಿಗೆ ಖುದ್ದು ಭೇಟಿ ನೀಡಿದ ಅವರು, ಮತದಾರರ ಪಟ್ಟಿಗೆ



ಹೊಸದಾಗಿ ಹೆಸರು ಸೇರ್ಪಡೆ, ತಿದ್ದುಪಡಿ ಹಾಗೂ ಸ್ಥಳಾಂತರ, ನಿಷ್ಕ್ರಮಣೆ ಕುರಿತು ಮತಗಟ್ಟೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ಮತಗಟ್ಟೆ ಅಧಿಕಾರಿಗಳು ತಪ್ಪದೇ ನೊಂದಣಿ ವಹಿ ನಿರ್ವಹಿಸಬೇಕು. ಪ್ರತಿ ಮನೆ ಮನೆಗೂ ತೆರಳಿ 18 ವರ್ಷ ತುಂಬಿದ ಎಲ್ಲರನ್ನೂ ಮತದಾರರ ಪಟ್ಟಿಗೆ ಸೇರ್ಪಡೆಗೊಳ್ಳುವಂತೆ ಪ್ರೇರೇಪಿಸಬೇಕು. ಮಹಿಳಾ ಮತದಾರರ ನೊಂದಣಿ ಕೈತಪ್ಪಿ ಹೋಗದಂತೆ ಜಾಗೃತಿ ವಹಿಸಬೇಕು ಎಂದು ಮತದಾರರ ಪಟ್ಟಿ ವೀಕ್ಷಕರಾದ ಡಾ.ಶಮ್ಲಾ ಇಕ್ಬಾಲ್ ಮತಗಟ್ಟೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಇದಕ್ಕೂ ಮುನ್ನಾ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ 6 ವಿಧಾನಸಭಾ ಕ್ಷೇತ್ರಗಳ ಮತದಾರ ಪಟ್ಟಿಯಲ್ಲಿನ ಹೆಸರು ಸೇರ್ಪಡೆ ಹಾಗೂ ಬದಲಾವಣೆಗಾಗಿ ಅರ್ಜಿ ಸಲ್ಲಿಸಿದ ಮೇಲ್ವಿಚಾರಣೆ ನಡೆಸಿದರು.

---

## ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳ ಬೀಳ್ಕೊಡುಗೆ ಸಮಾರಂಭಕ್ಕೆ ಚಾಲನೆ



» **ಚಿತ್ರದುರ್ಗ**

ಗುಣಮಟ್ಟದ ವಿದ್ಯಾರ್ಥಿಗಳು ಹಾಗೂ ಶಿಕ್ಷಕರುಗಳಿದ್ದಾಗ ಮಾತ್ರ ರ್‍ಯಾಂಕ್ ಪಡೆಯಲು ಸಾಧ್ಯ ಎಂದು ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸಿ.ರಘುಚಂದನ್ ಹೇಳಿದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ, ವೆಂಕಟೇಶ್ವರ ಶಿಕ್ಷಣ ಮಹಾವಿದ್ಯಾಲಯದಲ್ಲಿ ಬುಧವಾರ ಹಮ್ಮಿಕೊಳ್ಳಲಾಗಿದ್ದ ಮಧುರ ಕ್ಷಣಗಳು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿ ಬೀಳ್ಕೊಡುಗೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ಜ್ಞಾನ ಎನ್ನುವುದು ಪವಿತ್ರ ಶ್ರೇಷ್ಟವಾದುದು. ಪರಮಾತ್ಮನ ಸ್ವರೂಪವಿದ್ದಂತೆ. ಶಿಕ್ಷಕರುಗಳು ವೃತ್ತಿ ಧರ್ಮದ ಪಾವಿತ್ರತೆಯನ್ನು ಕಾಪಾಡಿಕೊಳ್ಳಬೇಕು. ಶಿಕ್ಷಕರುಗಳಲ್ಲಿ ತಾಳ್ಮೆಯಿರಬೇಕು. ನಿರ್ಧಿಷ್ಠವಾದ ಗುರಿಯಿಟ್ಟುಕೊಂಡು ಮುಂದಿನ ಹೆಜ್ಜೆಯಿಡಬೇಕು. ಗುಣಮಟ್ಟದ ವಿದ್ಯಾರ್ಥಿಗಳು ಕಡಿಮೆಯಾಗುತ್ತಿರುವುದರಿಂದ ಬಹಳ ದಿನಗಳಿಂದ ನಮ್ಮ ಸಂಸ್ಥೆಗೆ ರ್‍ಯಾಂಕ್ ಬಂದಿರಲಿಲ್ಲ. ಕಳೆದ ಜುಲೈ/ಆಗಸ್ಟ್‌ನಲ್ಲಿ ದಾವಣಗೆರೆ ವಿಶ್ವವಿದ್ಯಾನಿಲಯದಿಂದ ನಡೆದ ಬಿ.ಕಾಂ. ಅಂತಿಮ ಪದವಿ ಪರೀಕ್ಷೆಯಲ್ಲಿ ಕವಿತಾ ಪ್ರಥಮ ರ್‍ಯಾಂಕ್ ಗಳಿಸಿ ಸಂಸ್ಥೆಗೆ ಕೀರ್ತಿ ತಂದಿದ್ದಾರೆ. ಪಿ.ಯು.ಸಿ.ಯಲ್ಲಿ ರಾಜ್ಯಕ್ಕೆ ಆರನೆ ರ್‍ಯಾಂಕ್ ಗಳಿಸಿದ್ದರು. ಎಸ್.ಎಸ್.ಎಲ್.ಸಿ.ಯಲ್ಲಿ ಅತಿ ಹೆಚ್ಚು ಗಳಿಸಿದ ಪರಿಣಾಮ ಉಚಿತ ಶಿಕ್ಷಣ ನೀಡಿದ್ದೇವೆ ಎಂದರು. ತೆಲಂಗಾಣ, ರಾಜಸ್ಥಾನ, ಮಧ್ಯಪ್ರದೇಶ ಸೇರಿದಂತೆ ದೇಶದ ನಾನಾ ರಾಜ್ಯಗಳಿಂದ ವಿದ್ಯಾರ್ಥಿಗಳು ಇಲ್ಲಿಗೆ ಬಂದು ನಮ್ಮ ಸಂಸ್ಥೆಯಲ್ಲಿ ಶಿಕ್ಷಣ ಪಡೆದು ನಾನಾ ಕಡೆ ಉದ್ಯೋಗದಲ್ಲಿರುವುದು ನಿಜವಾಗಿಯೂ ನಮಗೆ ಖುಷಿ ಕೊಟ್ಟಿದೆ. ಸರ್ಕಾರದ ಗ್ರಾಂಟ್‌ಗಾಗಿ ಹದಿನೆಂಟು ವರ್ಷಗಳ ಕಾಲ ಕಾದು ಕೆಲಸ ಮಾಡಿದ ಸಿಬ್ಬಂದಿಗಳು ನಮ್ಮ ಸಂಸ್ಥೆಯಲ್ಲಿದ್ದಾರೆ. ಕೇವಲ ಹಣ ಗಳಿಕೆಯಷ್ಟೆ ನಮ್ಮ ಸಂಸ್ಥೆಯ ಉದ್ದೇಶವಲ್ಲ. ಶೈಕ್ಷಣಿಕ ಸಾರ್ಥಕತೆಗಾಗಿ ಶಿಕ್ಷಣ ಸಂಸ್ಥೆಯನ್ನು ನಡೆಸುತ್ತಿದ್ದೇವೆ. ವಿದ್ಯಾರ್ಥಿಗಳಲ್ಲಿ ಹುಡುಗಾಟ, ಉಡಾಫೆ ಇರಬಾರದು. ವೆಂಕಟೇಶ್ವರ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಜಿ.ಈ.ಭೈರಸಿದ್ದಪ್ಪ, ಆರ್.ಎಸ್.ರಾಜು, ಡಾ.ಬಿ.ಸಿ.ಅನಂತರಾಮು, ಎಂ.ವಿ.ಗೋವಿಂದರಾಜು, ಡಾ.ಕೆ.ಪಿ.ನಾಗಭೂಷಣ, ಡಾ.ಬಿ.ಚಂದ್ರಪ್ಪ, ಡಾ.ಜಿ.ಬಿ.ರಾಜಪ್ಪ, ವಿ.ಪ್ರಕಾಶ್, ಡಾ.ಲಿಂಗರಾಜು, ಆರ್.ಹಂಚಿನಮನೆ, ಬಸವರಾಜ್ ಸಿ. ಎಮ್.ಜಿ.ಪರಶುರಾಮ್ ಹಾಜರಿದ್ದರು.

---

## ಡಿ.21ರಂದು ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ

**ಚಿತ್ರದುರ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮ 2023-24ರ ಉದ್ಘಾಟನಾ ಸಮಾರಂಭ ಇದೇ ಡಿಸೆಂಬರ್ 21ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಮಹಾರಾಣಿ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ. ನಾರಾಯಣಸ್ವಾಮಿ ಘನ ಉಪಸ್ಥಿತಿ ವಹಿಸುವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಸಿ ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷಾ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಎನ್.ವೈ.ಗೋಪಾಲಕೃಷ್ಣ, ಡಾ.ಎಂ. ಚಂದ್ರಪ್ಪ, ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ ನಾರಾಯಣಸ್ವಾಮಿ, ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

---

**ಪ್ರಮುಖ ಸುದ್ದಿ**

# ಹೊಸದುರ್ಗ: ಮಾದಕ ವ್ಯಸನ ನಿರ್ಮೂಲನೆಯೇ ಗುರಿ

» **ಹೊಸದುರ್ಗ**

ಜಿಲ್ಲೆಯಾದ್ಯಂತ ಮಾದಕ ವಸ್ತುಗಳ ನಿರ್ಮೂಲನೆ ಮಾಡಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಆದೇಶದಂತೆ ಹೊಸದುರ್ಗ ತಾಲೂಕಿನಲ್ಲಿ ಸಂಪೂರ್ಣ ಮಾದಕ ವಸ್ತು ನಿರ್ಮೂಲನೆ ಮಾಡುವುದೇ ನಮ್ಮ ಗುರಿಯಾಗಿದೆ ಎಂದು ಪೊಲೀಸ್ ಇನ್ಸ್‌ಪೆಕ್ಟರ್ ತಿಮ್ಮಣ್ಣ ಹೇಳಿದರು.

ಪಟ್ಟಣದ ದುರ್ಗಾ ಐಟಿಐ ಕಾಲೇಜು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಭಾಂಗಣದಲ್ಲಿ ಬುಧವಾರ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಆಯೋಜಿಸಿದ್ದ ಅಪರಾಧ ತಡೆ ಮಾಸಾಚರಣೆ ಮತ್ತು ಮಾದಕ ವಸ್ತು ಸೇವನೆ ನಿರ್ಮೂಲನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಕಾಲೇಜು ವಿದ್ಯಾರ್ಥಿಗಳು ವ್ಯಸನಮುಕ್ತರಾಗಿ, ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು. ಉನ್ನತ ಅಧಿಕಾರಿಗಳನ್ನಾಗಿ ಮಾಡಬೇಕೆಂಬ ಮಹದಾಸೆಯನ್ನು ಹೊತ್ತು ನಿಮ್ಮ ತಂದೆ ತಾಯಿಯರು ನಿಮ್ಮನ್ನ ಕಾಲೇಜಿಗೆ ಕಳುಹಿಸುತ್ತಿದ್ದಾರೆ. ಅವರ ಆಶಯದಂತೆ ನೀವು ಜೀವನ ರೂಪಿಸಿಕೊಳ್ಳಬೇಕು. ವಿದ್ಯಾರ್ಥಿಗಳು ಯಾವುದೇ ಕಾರಣಕ್ಕೂ




ಅಮಲು ಬರುವ ಮಾದಕ ವಸ್ತುಗಳನ್ನ ಬಳಸಬಾರದು. ಮಾದಕ ವಸ್ತುಗಳಾದ ಗಾಂಜಾ, ಅಫೀಮು ಮಾರಾಟ ಮತ್ತು ಸೇವನೆ ಎಲ್ಲಿಯಾದರೂ ಕಂಡು ಬಂದರೆ, ತಕ್ಷಣ ನಿಮ್ಮ ಕಾಲೇಜು ಪ್ರಾಂಶುಪಾಲರು ಹಾಗೂ ಪೊಲೀಸ್ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದು ತಿಳಿಸಿದರು.

ಮಾದಕ ವಸ್ತು ಸೇವನೆ ಮಾಡಿ ಅಥವಾ ಮಾರಾಟ ಮಾಡಿ ಸಿಕ್ಕಿದ ವ್ಯಕ್ತಿಗಳಿಗೆ ಜೀವನಪರ್ಯಂತ ಕಾರಾಗೃಹ ಶಿಕ್ಷೆಯಾಗುತ್ತದೆ. ಭಾರತದಲ್ಲಿ ಮಾದಕ ವಸ್ತು ಸೇವನೆಯಿಂದ ದಿನಕ್ಕೆ ಕನಿಷ್ಠ 15 ಯುವಕರು ಆತ್ಮಹತ್ಯೆಗೆ ಬಲಿಯಾಗುತ್ತಿದ್ದಾರೆ. 7.5 ಕೋಟಿ ಯುವಕರು ದೇಶದಾದ್ಯಂತ ಈ ಮಾದಕ ವ್ಯಸನಕ್ಕೆ ತುತ್ತಾಗಿ ಜೀವನವನ್ನು ನರಕಗೊಳಿಸಿಕೊಂಡಿದ್ದಾರೆ. ಇತ್ತೀಚಿನ ದಿನಗಳಲ್ಲಿ ಬಾಲ್ಯಾವಸ್ಥೆಯಲ್ಲಿ ಕಾಣೆಯಾಗಿರುವ ಪ್ರಕರಣಗಳು ಹೆಚ್ಚುತ್ತಿವೆ. 18 ವರ್ಷದ ಒಳಗಿನ ಅಪ್ರಾಪ್ತ ಯುವತಿಯರನ್ನ ಪ್ರಚೋದಿಸಿ ಪ್ರೀತಿ, ಪ್ರೇಮದ ಬಲೆಯಲ್ಲಿ ಬಿಳಿಸಿದರೆ, ಪೋಕ್ಸೋ ಕಾಯಿದೆಯಡಿ ಕಠಿಣ ಶಿಕ್ಷೆ ವಿಧಿಸಲಾಗುವುದು. ವಿದ್ಯಾರ್ಥಿ ಜೀವನದಲ್ಲಿ ಕಠಿಣ ಅಭ್ಯಾಸ ಮಾಡಿ ಬದುಕನ್ನು ರೂಪಿಸಿಕೊಂಡಾಗ ದೇಶದ ಸತ್ಪ್ರಜೆಯಾಗಿ ಬಾಳಲು ಸಾಧ್ಯವಾಗುತ್ತದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಈ ವೇಳೆ ಕಾರ್ಯಕ್ರಮದಲ್ಲಿ ದುರ್ಗಾ ಕೈಗಾರಿಕೆಯ ಸಂಸ್ಥೆ ಕಾರ್ಯದರ್ಶಿ ಬಿ.ವಿ.ಸತೀಶ್ ಬಾಬು, ಕಚೇರಿ ಅಧೀಕ್ಷಕರಾದ ಎಲ್.ಕೆ.ಮನೋಹರ್, ಪೊಲೀಸ್ ಸಿಬ್ಬಂದಿ ಮಂಜುನಾಥ್, ಉಪನ್ಯಾಸಕರಾದ ಡಿ.ಎಂ.ಕುಮಾರ್, ಹರೀಶ್, ನಟರಾಜ್, ವೈ.ಕುಮಾರ್, ರಮೇಶ್, ಮಹೇಶ್, ರಾಜು, ತುಂಬಿನಕೆರೆ ಬಸವರಾಜ್ ಮತ್ತು ಮೂಡ್ಲಪ್ಪ ಸೇರಿದಂತೆ ಕಾಲೇಜು ಸಿಬ್ಬಂದಿಗಳು ಮತ್ತು ನೂರಾರು ವಿದ್ಯಾರ್ಥಿಗಳಿದ್ದರು.

> ನಗರಗಳಲ್ಲಿ ವಿದ್ಯಾಭ್ಯಾಸ ಮಾಡುವ ಬಹಳಷ್ಟು ಯುವಕರು ಹೆಚ್ಚು ಗ್ರಾಮೀಣ ಪ್ರದೇಶದಿಂದ ಬಂದವರೇ ಆಗಿದ್ದೀರಿ. ತಂದೆ ತಾಯಿಗಳು ಬಡತನದಿಂದ ಕಷ್ಟಪಟ್ಟು ಬದುಕನ್ನು ಕಟ್ಟಿಕೊಳ್ಳಲು ನಿಮ್ಮನ್ನು ವಿದ್ಯಾಭ್ಯಾಸ ಮಾಡಿಸುತ್ತಿದ್ದಾರೆ. ನೀವು ಇಲ್ಲಿ ಕಲಿಯುವ ಮೌಲ್ಯಯುತ ಕೆಲಸದಿಂದ ಮುಂದಿನ ಪೀಳಿಗೆ ನೆಮ್ಮದಿಯ ಬದುಕು ಸಾಧಿಸಲು ಅವಕಾಶವಾಗುವುದು. ನಿನ್ನ ಬದುಕಿನ ದೋಣಿಗೆ ನೀನೇ ನಾವಿಕನಾಗಬೇಕು. ಶ್ರಮಪಟ್ಟು ವಿದ್ಯಾಭ್ಯಾಸ ಮಾಡಿ ಕೆಲಸ ಕಲಿತ ವ್ಯಕ್ತಿಗೆ ಬದುಕಿನಲ್ಲಿ ಸೋಲೆಂಬುದೇ ಇಲ್ಲ.
>
> » **ಡಿ.ಎಸ್. ಪ್ರದೀಪ್ ಯುವ ಉದ್ಯಮಿ ಮತ್ತು ಸಮಾಜ ಸೇವಕರು, ಹೊಸದುರ್ಗ**

ಫಾಸ್ಟ್ ನ್ಯೂಸ್

## ಚೌಳೂರಿನ ಜಗಜೀವನರಾಂ ನಿವಾಸಿ ಭಜನೆಲಕ್ಷ್ಮಿದೇವಿ ನಿಧನ

» ಚಳ್ಳಕೆರೆ



ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಚೌಳೂರು ಗ್ರಾಮದ ಜಗಜೀವನರಾಂ ಕಾಲೋನಿ ನಿವಾಸಿ, ಸಮಾಜ ಸೇವಕಿ ಭಜನೆಲಕ್ಷ್ಮಿದೇವಿ(72) ಬುಧವಾರ ಬೆಳಗಿನಜಾವ ಅವರ ಸ್ವಗೃಹದಲ್ಲಿ ನಿಧನರಾಗಿರುತ್ತಾರೆ. ಸುತ್ತಮುತ್ತಲ ಗ್ರಾಮಗಳಲ್ಲಿ ಯಾವುದೇ ರೀತಿಯ ಧಾರ್ಮಿಕ, ಮಂಗಳ ಕಾರ್ಯಗಳು ನಡೆದರೂ ಅಲ್ಲಿ ಭಜನೆ ನಡೆಸುವ ಮೂಲಕ ಜಾನಪದ ಕಲೆಯನ್ನು ಉಳಿಸಿದ ಕೀರ್ತಿ ಲಕ್ಷ್ಮಿದೇವಿಯವರದ್ದು. ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಚೌಳೂರು ಪ್ರಕಾಶ್ ಇವರ ಪುತ್ರರಾಗಿದ್ದು, ಇಬ್ಬರು ಪುತ್ರಿ ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಗ್ರಾಮದ ಜಮೀನಿನಲ್ಲಿ ಬುಧವಾರ ಸಂಜೆ ನಡೆಯಿತು.

## ಅಪ್ರಾಪ್ತ ಬಾಲಕಿಯೊಂದಿಗೆ ಲೈಂಗಿಂಕ ಸಂಪರ್ಕ: ಹೆಣ್ಣು ಮಗುವಿಗೆ ಜನ್ಮನೀಡಿದ ಬಾಲಕಿ: ದೂರು.

» ಚಳ್ಳಕೆರೆ

ತಾಲ್ಲೂಕಿನನನ್ನಿವಾಳಗ್ರಾಮಪಂಚಾಯಿತಿವ್ಯಾಪ್ತಿಯ ಬೋರಪ್ಪನಹಟ್ಟಿ ಗ್ರಾಮದಲ್ಲಿ ಮದುವೆಯಾಗುವ ಆಮೀಷವೊಡ್ಡಿ ಸುಮಾರು 17 ವರ್ಷದ ಅಪ್ರಾಪ್ತ ಬಾಲಕಿಯೊಂದಿಗೆ ಲೈಂಗಿಂಕ ಸಂಪರ್ಕ ನಡೆಸಿ ಆಕೆ ಹೆಣ್ಣು ಮಗುವಿಗೆ ಜನ್ಮನೀಡಿದ್ದು, ಈ ಬಗ್ಗೆ ಅಪ್ರಾಪ್ತ ಬಾಲಕಿಯ ತಾಯಿ ದೂರು ನೀಡಿರುತ್ತಾರೆ.

ಬೋರಪ್ಪನಹಟ್ಟಿ ಗ್ರಾಮದ ಬೋರಮ್ಮ ಎಂಬುವವರು ದೂರು ನೀಡಿದ್ದು, ಅದೇ ಗ್ರಾಮ ಪಿ.ಸಿದ್ದೇಶ(23) ನಾವು ಜಮೀನಿನ ಕೆಲಸಕ್ಕೆ ಹೋದ ಸಂದರ್ಭದಲ್ಲಿ ನನ್ನ ಮಗಳು 17 ವರ್ಷದ ಅಪ್ರಾಪ್ತ ಬಾಲಕಿ ಮನೆಯಲ್ಲೇ ಇರುತ್ತಿದ್ದು, ನಿನ್ನನ್ನೇ ಮದುವೆಯಾಗುವೆ ಎಂದು ಅವಳಿಗೆ ಸುಳ್ಳು ಭರವಸೆ ನೀಡಿ ನಿರಂತರ ಲೈಂಗಿಂಕ ಸಂಪರ್ಕ ನಡೆಸಿದ ಹಿನ್ನೆಲೆಯಲ್ಲಿ ಡಿ.19ರ ಮಂಗಳವಾರ ರಾತ್ರಿ ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ನನ್ನ ಮಗಳು ಹೆಣ್ಣು ಮಗುವಿಗೆ ಜನ್ಮನೀಡಿರುತ್ತಾಳೆ. ಅಪ್ರಾಪ್ತ ಬಾಲಕಿಯಾದ ನನ್ನನ್ನ ಮಗಳಿಗೆ ಅಮೀಷವೊಡ್ಡಿ ಬಲತ್ಕರಿಸಿದ ಸಿದ್ದೇಶದ ವಿರುದ್ಧ ಕ್ರಮ ಕೈಗೊಳ್ಳುವಂತೆ ದೂರು ನೀಡಿರುತ್ತಾಳೆ. ಪಿಎಸ್ಐ ಕೆ.ಸತೀಶ್‌ನಾಯ್ಕ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ಧಾರೆ.

## ಹೊರಗುತ್ತಿಗೆದಾರರಿಂದ ಅನಿರ್ಧಿಷ್ಟಾವಧಿ ಮುಷ್ಕರ ಆರಂಭ



» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ನಗರಸಭೆಯಲ್ಲಿ ಹೊರಗುತ್ತಿಗೆದಾರರಾಗಿ ಕಾರ್ಯನಿರ್ವಹಿಸುತ್ತಿರುವ ಸುಮಾರು 40ಕ್ಕೂ ಹೆಚ್ಚು ಜನರು ಬುಧವಾರ ತಮ್ಮ ಕೆಲಸಗಳನ್ನು ಸ್ಥಗಿತಗೊಳಿಸಿ ಪ್ರತಿಭಟನೆಯಲ್ಲಿ ಪಾಲ್ಗೊಂಡರು.ಇಲ್ಲಿನಹೊರಗುತ್ತಿಗೆದಾರರಸಂಘದ ಉಪಾಧ್ಯಕ್ಷ ಪೆನ್ನೇಶ್ ನೇತೃತ್ವದಲ್ಲಿ ಬೆಳಗಿನಿಂದ ಸಂಜೆವರೆಗೂ ಕಚೇರಿಯ ಮುಂದೆಯೇ ಧರಣಿ ಕುಳಿತು ಪ್ರತಿಭಟಿಸಿದರು. ರಾಜ್ಯ ಸರ್ಕಾರ ಕೂಡಲೇ ಹೊರಗುತ್ತಿಗೆದಾರರಿಗೆ ಪೌರಕಾರ್ಮಿಕರಂತೆ ನಮಗೂ ನೇರಪಾವತಿ ಸೌಲಭ್ಯವೂ ಸೇರಿದಂತೆ ಇತರೆ ಎಲ್ಲಾ ಸೌಲಭ್ಯಗಳನ್ನು ನೀಡುವ ತನಕ ಮುಷ್ಕರ ಮುಂದುವರೆಸುವದಾಗಿ ತಿಳಿಸಿದರು.

ಬಿ.ಪ್ರಸನ್ನಕುಮಾರ್, ಆರ್.ಹನುಮಂತರಾಯ, ಟಿ.ಪ್ರತಾಪ್, ಕೆ.ಕೆಂಚರಾಜ, ಶ್ರೀನಿವಾಸ್ ಸೇರಿದಂತೆ ಹಲವಾರು ಕಾರ್ಮಿಕರು ಮುಷ್ಕರದಲ್ಲಿ ಪಾಲ್ಗೊಂಡಿದ್ದರು.

## ತರಬೇತಿ

» ದಾವಣಗೆರೆ

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಇನ್‌ಸ್ಟಿಟ್ಯೂಟ್ ಆಫ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿ ಸಂಸ್ಥೆಗಳಿಂದ ಜನವರಿ ಮಾಹೆಯಲ್ಲಿ ಪ್ರಾರಂಭವಾಗಲಿರುವ 6 ತಿಂಗಳ ಅವಧಿಯ ದೂರಶಿಕ್ಷಣ ಡಿಪ್ಲೊಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಗಾಗಿ ಸಹಕಾರ ಸಂಘ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ತರಬೇತಿ ಹೊಂದದ ಸಿಬ್ಬಂದಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ರಾಜ್ಯದ ಬೆಂಗಳೂರು, ಮೈಸೂರು, ಮಡಿಕೇರಿ, ಮೂಡಬಿದ್ರೆ, ಶಿವಮೊಗ್ಗ, ಧಾರವಾಡ, ಬೆಳಗಾವಿ ಹಾಗೂ ಕಲಬುರಗಿ ಸ್ಥಳಗಳಲ್ಲಿ ತರಬೇತಿ ನೀಡಲಾಗುವುದು. ತರಬೇತಿಯನ್ನು ಪಡೆಯಲಿಚ್ಛಿಸುವ ಅಭ್ಯರ್ಥಿಗಳು ಸಹಕಾರ ಸಂಘ, ಸಹಕಾರ ಇಲಾಖೆ ಅಥವಾ ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ವೇತನ ಪಡೆಯುವ ನೌಕರರಾಗಿರಬೇಕು. ಖಾಸಗಿ ಅಭ್ಯರ್ಥಿಗಳಿಗೆ ನಿಯಮಿತವಾಗಿ ಅವಕಾಶವನ್ನು ಕಲ್ಪಿಸಲಾಗಿದೆ. ವಯೋಮಿತಿ 16 ವರ್ಷ ಮೇಲ್ಪಟ್ಟವರು ಅರ್ಜಿ ಸಲ್ಲಿಸಬಹುದು.

### ರಾಜ್ಯ ಮಕ್ಕಳ ರಕ್ಷಣಾ ನೀತಿ-2016 ಕುರಿತು ತರಬೇತಿ ಕಾರ್ಯಾಗಾರ

# ಜಿಲ್ಲೆಯಲ್ಲಿ ಮಕ್ಕಳ ಸ್ನೇಹಿ ವಾತಾವರಣ ನಿರ್ಮಾಣಕ್ಕೆ ಅಗತ್ಯ ಕ್ರಮ: ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್

» ಚಿತ್ರದುರ್ಗ

ಮಕ್ಕಳ ಸರ್ವತೋಮುಖ ಬೆಳವಣಿಗೆ ಹಾಗೂ ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ಜಿಲ್ಲೆಯಲ್ಲಿ ಹಲವು ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ಮಕ್ಕಳ ಸ್ನೇಹಿ ವಾತಾವರಣ ನಿರ್ಮಾಣಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಎಸ್.ಜೆ.ಸೋಮಶೇಖರ್ ಹೇಳಿದರು.



ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ವತಿಯಿಂದ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016ರ ಕುರಿತು ಶೈಕ್ಷಣಿಕ ಅನುಷ್ಠಾನಾಧಿಕಾರಿಗಳಿಗೆ ಏರ್ಪಡಿಸಿದ ಒಂದು ದಿನದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಮಕ್ಕಳ ರಕ್ಷಣೆ ದೃಷ್ಟಿಯಿಂದ ಜಿಲ್ಲೆಯ ಎಲ್ಲಾ 189 ಗ್ರಾಮ ಪಂಚಾಯಿತಿ ಕಚೇರಿಗಳಲ್ಲಿಯೂ 1098 ಹಾಗೂ 112 ಮಕ್ಕಳ ಸಹಾಯವಾಣಿ ಸಂಖ್ಯೆಯನ್ನು ಪ್ರಚುರ ಪಡಿಸಲಾಗಿದೆ. ಇದರ ಜೊತೆಗೆ ಮಕ್ಕಳ ಗ್ರಾಮ ಸಭೆಗಳನ್ನು ಯಶಸ್ವಿಯಾಗಿ ಮಾಡಲಾಗಿದೆ. ಕೃಷಿ ಹೊಂಡ, ಕಲ್ಲು ಕ್ವಾರಿ ಹಾಗೂ ಜಲಮೂಲಗಳ ಸುತ್ತ ಅಗತ್ಯ ಮುನ್ನಚ್ಚರಿಕೆ ಕ್ರಮ ಕೈಗೊಂಡು ಅವಘಡಗಳು ಸಂಬಂಧಿಸದಂತೆ ಕ್ರಮ ಕೈಗೊಳ್ಳಲಾಗಿದೆ. ಶಾಲೆಗಳ ಕಟ್ಟಡದ ಮೇಲೆ ವಿದ್ಯುತ್ ತಂತಿಗಳು, ಶಾಲಾ ಆವರಣದಲ್ಲಿ ವಿದ್ಯುತ್ ಕಂಬಗಳು ಅಳವಡಿಕೆಯಾಗಿರುವ ಬಗ್ಗೆ ಪರಿಶೀಲಿಸಿ ಅವುಗಳನ್ನು ಅಲ್ಲಿಂದ ತೆರವುಗೊಳಿಸಿ, ವಿದ್ಯುತ್ ಅವಘಡಗಳು ಸಂಭವಿಸದಂತೆ ಕ್ರಮ ವಹಿಸಲಾಗಿದೆ ಎಂದು ತಿಳಿಸಿದರು.

ಮಕ್ಕಳ ಹಕ್ಕುಗಳ ರಕ್ಷಣೆ ಕುರಿತಂತೆ ಜಿಲ್ಲೆಯ ಎಲ್ಲಾ ಜಿಲ್ಲಾ ಮಟ್ಟ, ತಾಲ್ಲೂಕು ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅಧಿಕಾರಿಗಳಿಗೂ ಸಹ ಜವಾಬ್ದಾರಿಗಳಿದ್ದು, ಎಲ್ಲರೂ ತಮ್ಮ ವ್ಯಾಪ್ತಿಯಲ್ಲಿ ಮಕ್ಕಳ ರಕ್ಷಣೆಗೆ ತಕ್ಷಣ ಮುಂದಾಗಬೇಕು ಎಂದು ಹೇಳಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಮಾತನಾಡಿ, ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016 ರ ಕುರಿತು ಶೈಕ್ಷಣಿಕ ಅನುಷ್ಠಾನಾಧಿಕಾರಿಗಳಿಗೆ ಒಂದು ದಿನದ ತರಬೇತಿ ಕಾರ್ಯಾಗಾರ ಹಮ್ಮಿಕೊಂಡಿದ್ದು, ಶೈಕ್ಷಣಿಕ ಅನುಷ್ಠಾನಾಧಿಕಾರಿಗಳು ತಂದೆ-ತಾಯಿಗಿಂತಲೂ ಹೆಚ್ಚಿನದಾಗಿ ಮಕ್ಕಳ ರಕ್ಷಣಾ ಕಾರ್ಯದಲ್ಲಿ ತೊಡಗಿರುತ್ತಾರೆ. ಮಕ್ಕಳ ರಕ್ಷಣೆ ಹಾಗೂ ಬೆಳವಣಿಗೆಗಾಗಿ ಯಾವೆಲ್ಲ ಕ್ರಮಗಳನ್ನು ಕೈಗೊಳ್ಳಬೇಕು ಎಂಬುದರ ಬಗ್ಗೆ ಮಕ್ಕಳ ರಕ್ಷಣಾ ನೀತಿ-2016ರಲ್ಲಿ ಸ್ಪಷ್ಟವಾಗಿ ತಿಳಿಸಲಾಗಿದೆ ಎಂದರು.ಮಕ್ಕಳ ಬಗ್ಗೆ ರಕ್ಷಣಾ ಸಂಬಂಧವಾದ ಕೆಲಸ ಮಾಡದೇ ಅಮಾನವೀಯವಾಗಿ ನಡೆದುಕೊಳ್ಳುವ ಘಟನೆಗಳು ಇತ್ತೀಚೆಗೆ ವರದಿಯಾಗುತ್ತಿವೆ. ಹಾಗಾಗಿ ಶೈಕ್ಷಣಿಕ ಅನುಷ್ಠಾನಾಧಿಕಾರಿಗಳು ಈ ಕುರಿತು ವಿಷಯಗಳನ್ನು ಸೂಕ್ಷ್ಮವಾಗಿ ತಿಳಿದುಕೊಂಡು, ಎಚ್ಚರವಹಿಸಬೇಕು, ಅಲ್ಲದೆ ರಾಜ್ಯ ಮಕ್ಕಳ ರಕ್ಷಣಾ ನೀತಿ-2016 ಅನ್ನು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರಬೇಕು ಎಂದು ಹೇಳಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ಅಧೀಕ್ಷಕ ಕುಮಾರಸ್ವಾಮಿ ಮಾತನಾಡಿ, ಮಕ್ಕಳ ಮೇಲೆ ಯಾವುದೇ ರೀತಿಯ ದೌರ್ಜನ್ಯ ಆಗದ ರೀತಿಯಲ್ಲಿ ಅವರನ್ನು ಸಂರಕ್ಷಣೆ ಮಾಡುವುದು ಎಲ್ಲರ ಕರ್ತವ್ಯವಾಗಿದೆ ಎಂದರು.

ಪೊಲೀಸ್ ಹಾಗೂ ಇನ್ನಿತರ ಎಲ್ಲಾ ತುರ್ತು ಸೇವೆಗಳಿಗಾಗಿ 112 ಗೆ ಉಚಿತ ಕರೆ ಮಾಡಬಹುದು. ಚಿತ್ರದುರ್ಗ ಜಿಲ್ಲೆಯ 112 ತುರ್ತು ಸೇವೆಯು ರಾಜ್ಯದಲ್ಲಿಯೇ ಎರಡನೇ ಸ್ಥಾನದಲ್ಲಿದೆ. ಯಾವುದೇ ಒಂದು ಘಟನೆಯಾದರೆ ಈ ಮೊದಲೇ 39 ನಿಮಿಷದಲ್ಲಿ ತಲುಪಲಾಗುತ್ತಿತ್ತು. ಈಗ 24 ನಿಮಿಷದೊಳಗೆ ತಲುಪಿ ಪೊಲೀಸರು ಸಮಸ್ಯೆಗೆ ಸ್ಪಂದಿಸಲಿದ್ದಾರೆ ಎಂದರು.

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಮಾತನಾಡಿ, ಶಾಲೆಗಳು ಸೇರಿದಂತೆ ಎಲ್ಲಾ ಶೈಕ್ಷಣಿಕ ಸಂಸ್ಥೆಗಳಲ್ಲೂ ರಾಜ್ಯ ಮಕ್ಕಳ ರಕ್ಷಣಾ ನೀತಿ-2016 ಇದರ ಪರಿಣಾಮಕಾರಿ ಅನುಷ್ಠಾನವಾಗಬೇಕು. ಹಾಗಾಗಿ ಇದರ ಕುರಿತು ಮಾಹಿತಿ ನೀಡಲು ಶೈಕ್ಷಣಿಕ ಅನುಷ್ಠಾನಾಧಿಕಾರಿಗಳಿಗೆ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿದೆ ಎಂದರು.ಚಿತ್ರದುರ್ಗ ಜಿಲ್ಲೆಯನ್ನು ಮಕ್ಕಳಿಗೆ ರಕ್ಷಣೆ ಇರುವ, ಸುರಕ್ಷತಾ ವಾತಾವರಣ ಇರುವ ಜಿಲ್ಲೆಯನ್ನಾಗಿ ಮಾರ್ಪಡಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು. ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016ರ ಕುರಿತು ಕೊಪ್ಪಳ ಜಿಲ್ಲೆಯ ಯೂನಿಸೆಫ್ ಮಕ್ಕಳ ಸಂರಕ್ಷಣಾ ಯೋಜನೆ ಪ್ರಾದೇಶಿಕ ಸಂಯೋಜಕ ಕೆ.ರಾಘವೇಂದ್ರ ಭಟ್ಟ ವಿಶೇಷ ಉಪನ್ಯಾಸ ನೀಡಿದರು.ಕಾರ್ಯಕ್ರಮದಲ್ಲಿ ಚಿತ್ರದುರ್ಗ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಡಾ.ಆರ್.ಪ್ರಭಾಕರ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಮಕ್ಕಳ ಕಲ್ಯಾಣ ಸಮಿತಿ ಸದಸ್ಯರಾದ ಡಿ.ಕೆ.ಶೀಲಾ, ಜಿ.ಟಿ.ಬಸವರಾಜ್, ಬಾಲನ್ಯಾಯ ಮಂಡಳಿ ಸದಸ್ಯರಾದ ಸುಮನ ಎಸ್ ಅಂಗಡಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ ಸೇರಿದಂತೆ ಜಿಲ್ಲೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿಆರ್‌ಸಿ ಹಾಗೂ ಮುಖ್ಯ ಶಿಕ್ಷಕರು, ವಸತಿ ಶಾಲೆಗಳ ಪ್ರಾಂಶುಪಾಲರು, ನಿಲಯ ಪಾಲಕರು ಇದ್ದರು.

# ಸಾಮೂಹಿಕ ವಿವಾಹ ಮಹೋತ್ಸವಕ್ಕೆ ನಾಡಿದ ವಿವಿಧ ಮಠಾಧೀಶರುಗಳು ಭಾಗಿ

### ಡಿ.21 ಹಾಗು 22 ರಂದು ಹಿರೇಹಾಲಿವಾಣ ಗ್ರಾಮದಲ್ಲಿ ಶ್ರೀ ಬೀರಲಿಂಗೇಶ್ವರ ಸ್ವಾಮಿಯ ದೊಡ್ಡ ಎಡೆ ಜಾತ್ರೆ,ಮರಿಬನ್ನಿ, ಕಾರ್ತಿಕ ಮಹೋತ್ಸವ ಹಾಗೂ ಸಾಮೂಹಿಕ ವಿವಾಹ ಮಹೋತ್ಸವ ಕಾರ್ಯಕ್ರಮ


» ವಿಶೇಷ ವರದಿ:ನಾಗತಿಹಳ್ಳಿಮಂಜುನಾಥ್

ದಾವಣಗೆರೆ:ದಾವಣಗೆರೆ ಜಿಲ್ಲೆಯ ಹರಿಹರ ತಾಲೂಕಿನ ಹಿರೇ ಹಾಲಿವಾಣ ಗ್ರಾಮದಲ್ಲಿ ಡಿ.21 ರಿಂದ ಡಿ.22 ರವರೆಗೆ ಒಟ್ಟು ಎರಡು ದಿನಗಳ ಕಾಲ ಗ್ರಾಮದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ವೈಭವಯುತವಾಗಿ ಜರುಗಲಿವೆ.

ಎರಡು ದಿನಗಳ ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀ ಬೀರಲಿಂಗೇಶ್ವರ ಸ್ವಾಮಿಯ ದೊಡ್ಡ ಎಡೆ ಜಾತ್ರೆ, ಮರಿಬನ್ನಿ ಕಾರ್ಯಕ್ರಮ ಮತ್ತು ಕಾರ್ತಿಕ ಮಹೋತ್ಸವ ಹಾಗೂ ಸಾಮೂಹಿಕ ವಿವಾಹಗಳು ನಡೆಯಲಿವೆ.

ಜಾತ್ರಾ ಮಹೋತ್ಸದ ಅಂಗವಾಗಿ ಡಿ.21 ರಂದು ಗುರುವಾರ ಸಾಯಂಕಾಲ ಹೊಳೆಪೂಜೆ ಮತ್ತು ಪಾದಪೂಜೆ ಹಾಗೂ ಗ್ರಾಮದ ಎಲ್ಲಾ ದೇವರುಗಳಿಗೆ ವಿಶೇಷ ಪೂಜೆ ಮತ್ತು ಆರಾಧನೆ ನಂತರ ಶ್ರೀ ಬೀರಲಿಂಗೇಶ್ವರ ಸಂಘದವರಿಂದ ಡೊಳ್ಳಿನಕುಣಿತ, ಹಾಗೂ ಹಾಲಿವಾಣದ ವಿವಿಧ ಸಂಘಗಳ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

ಡಿ.22 ರಂದು ಶುಕ್ರವಾರ ಮಧ್ಯಾಹ್ನ 12 ಗಂಟೆಯಿಂದ 12.21 ಗಂಟೆಯ ಒಳಗೆ ಶ್ರೀ ಬೀರಲಿಂಗೇಶ್ವರ ಸ್ವಾಮಿಯ ದೊಡ್ಡ ಎಡೆ ವೈಭಯುವ ಕಾರ್ಯಕ್ರಮ ನಡೆಯಲಿದ್ದು ನಂತರ ಮಧ್ಯಾಹ್ನ 12.21 ರಿಂದ ಸಲ್ಲುವ ಅಭೀಜಿತ್ ಶುಭ ಲಗ್ನದ ಶುಭ ಮುಹೋರ್ತದಲ್ಲಿ ನಾಡಿನ ಅನೇಕ ಮಠಾಧೀಶರ ಸಮಕ್ಷೇಮದಲ್ಲಿ, ಗ್ರಾಮದ ಮುಖಂಡರುಗಳ, ಗುರು ಹಿರಿಯರ ಸಮ್ಮುಖದಲ್ಲಿ, ಮಧು-ವರರ ತಂದೆ ತಾಯಿಗಳ



ಹಾಗೂ ಅಪಾರ ಬಂಧು ಬಳಗದ ನಡುವೆ ಸಾಮೂಹಿಕ ವಿವಾಹ ನಡೆಯಲಿದ್ದು ನಂತರ ಅನ್ನಸಂತರ್ಪಣೆ ನಡೆಯಲಿದೆ.

ಇದೇ ದಿನ ಮಧ್ಯಾಹ್ನ 12.30 ಕ್ಕೆ ನಡೆಯಲಿರುವ ಬೃಹತ್ ಧಾರ್ಮಿಕ ಸಮಾರಂಭದಲ್ಲಿ ಕಾಗಿನೆಲೆ ಗುರುಪೀಠದ ಜಗದ್ಗುರು ಶ್ರೀನಿರಂಜನಾನಂದಪುರಿ ಮಹಾಸ್ವಾಮೀಜಿ, ಹೊಸದುರ್ಗ ಕನಕಗುರುಪೀಠ ಶಾಖಾ ಮಠದ ಶ್ರೀ ಈಶ್ವರಾನಂದಪುರಿಸ್ವಾಮೀಜಿ, ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಶ್ರೀ ಪ್ರಸನ್ನಾನಂದಪುರಿ ಸ್ವಾಮೀಜಿ, ಚಿತ್ರದುರ್ಗ ಯಾದವ ಗುರುಪೀಠದ ಶ್ರೀ ಯಾದವಾನಂದ ಸ್ವಾಮೀಜಿ, ರಟ್ಟಿಹಳ್ಳಿ ಕಬ್ಬಿಣಕಂಥಿ ಮಠದ ಶ್ರೀ ಶಿವಲಿಂಗ ಶಿವಾಚಾರ್ಯ ಸ್ವಾಮೀಜಿ, ಹೊಸದುರ್ಗ ಕಂಚಿಟಿಗ ಗುರುಪೀಠದ ಶ್ರೀ ಶಾಂತವೀರ ಸ್ವಾಮೀಜಿ, ಚಂದ್ರಗಿರಿಮಠದ ಶ್ರೀ ಸದ್ಗುರು ಮುರುಳೀಧರ ಸ್ವಾಮೀಜಿ, ಹಾಲಿವಾಣ ರಾಜಯೋಗಿನಿ ಬ್ರಹ್ಮಕುಮಾರಿ ಮಂಜುಳಅಕ್ಕನವರು, ಹಾಲಿವಾಣ ಶ್ರೀಮಠದ ಶೇಖರಯ್ಯಸ್ವಾಮಿಗಳು ಹಾಗೂ ಹಾಲಿವಾಣ(ಕುರುಬರಹಳ್ಳಿ) ಶ್ರೀಪೂಜಾರ ರೇವಣಸಿದ್ದೇಶ್ವರರು ದಿವ್ಯ ಸಾನಿಧ್ಯ ವಹಿಸಲಿದ್ದು ಶ್ರೀ ಬೀರಲಿಂಗೇಶ್ವರ ದೇವಸ್ಥಾನ ಕಮಿಟಿಯ ಅಧ್ಯಕ್ಷ ಎಸ್.ಜಿ.ಬಸವರಾಜಪ್ಪಜ್ಜ ಅಧ್ಯಕ್ಷತೆ ವಹಿಸಲಿದ್ದಾರೆ, ಹರಿಹರ ಯುವ ಕಾಂಗ್ರೆಶ್ ಮುಖಂಡ ನಂದಿಗಾವಿಶ್ರೀನಿವಾಸ್ ಕಾರ್ಯಕ್ರಮವನ್ನ ಉದ್ಘಾಟಿಸಲಿದ್ದು ಮುಖ್ಯ ಅತಿಥಿಗಳಾಗಿ ಹರಿಹರ ಕ್ಷೇತ್ರದ ಶಾಸಕ ಬಿ.ಪಿ.ಹರೀಶ್, ಮಾಜಿ ಶಾಸಕರುಗಳಾದ ಎಸ್.ರಾಮಪ್ಪ, ಹೆಚ್.ಎಸ್.ಶಿವಶಂಕರ್, ಶ್ರೀ ಬೀರಲಿಂಗೇಶ್ವರ ದೇವಸ್ಥಾನ ಕಮಿಟಿಯ ನಿರ್ದೇಶಕ ಎಸ್.ಜಿ.ಪರಮೇಶ್ವರಪ್ಪ ಸೇರಿದಂತೆ ಮತ್ತಿತರರು ಭಾಗವಹಿಸಲಿದ್ದಾರೆ. ಡಿ.24 ರಂದು ಭಾನುವಾರ ಶ್ರೀ ಬೀರಲಿಂಗೇಶ್ವರ ಸ್ವಾಮಿಯವರ ಕಾರ್ತಿಕೋತ್ಸವ ವೈಭವಯುತವಾಗಿ ಜರುಗಲಿದೆ.

# ಕೋಟ್ಪಾ ಕಾಯ್ದೆಯ ತಂಬಾಕು ಕಾರ್ಯಾಚರಣೆ



» ಚಿತ್ರದುರ್ಗ

ಕೋಟ್ಪಾ-2003ರ ಕಾಯ್ದೆಯ ಕುರಿತು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಬುಧವಾರ ಹೊಸದುರ್ಗ ತಾಲ್ಲೂಕಿನ ನಗರ ಪ್ರದೇಶಗಳಲ್ಲಿ ಜಿಲ್ಲಾ ಮಟ್ಟದ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ದಾಳಿ ನಡೆಸಲಾಯಿತು.

ಸಾರ್ವಜನಿಕರಲ್ಲಿ ಮತ್ತು ಅಂಗಡಿ ಮಾಲೀಕರಿಗೆ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ, ಪಾನ್ ಮಸಾಲ, ತಂಬಾಕು ಜಗಿದು ಉಗಿಯದಂತೆ ಎಚ್ಚರಿಸಿ ಜಾಗೃತಿ ಮೂಡಿಸಲಾಯಿತು.

ಸಂಬಂಧಪಟ್ಟ ಸೆಕ್ಷನ್-4, 6ಎ ಮತ್ತು 6ಬಿ ಬೋರ್ಡ್‌ಗಳನ್ನು ಹಾಕಲು ಸೂಚಿಸಲಾಯಿತು ಮತ್ತು ಸೆಕ್ಷನ್-4 ಅಡಿಯಲ್ಲಿ 22 ಕೇಸುಗಳನ್ನು ದಾಖಲಿಸಿ ರೂ. 2200 ದಂಡವನ್ನು ಮತ್ತು ಸೆಕ್ಷನ್-6ಎ ಅಡಿಯಲ್ಲಿ 08 ಕೇಸುಗಳನ್ನು ದಾಖಲಿಸಿ ರೂ. 800 ದಂಡವನ್ನು ವಸೂಲಿ ಮಾಡಲಾಯಿತು. ತಂಬಾಕು ದಾಳಿಯಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ.ಪ್ರಭುದೇವ್, ಹೊಸದುರ್ಗ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರತಿ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಸಿದ್ದರಾಮಪ್ಪ, ಪಿ.ಅಶೋಕ್, ಕ್ಷೇತ್ರ ಕಾರ್ಯಕ್ರಮ ವ್ಯವಸ್ಥಾಪಕ ಹೆಚ್.ಎಲ್.ಕಿರಣ್, ಬೀರೇಶ್ ಇದ್ದರು.

## ಅವಧಿ ವಿಸ್ತರಣೆ

ದಾವಣಗೆರೆ: ನಗರದ ಪ್ರಧಾನ ಅಂಚೆ ಕಚೇರಿಯಲ್ಲಿ ರಿಜಿಸ್ಟರ್ಡ್, ಪಾರ್ಸಲ್, ಸ್ಪೀಡ್ ಪೋಸ್ಟ್‌ಗಳ ಬುಕ್ಕಿಂಗ್ ಅವಧಿಯನ್ನು ಸಂಜೆ 6.30 ರವರೆಗೆ ಹಾಗೂ ರೈಲ್ವೆ ನಿಲ್ದಾಣದ ಮುಂಭಾಗದಲ್ಲಿನ ಆರ್‌ಎಂಎಸ್ ಅಂಚೆ ಕಚೇರಿಯಲ್ಲಿ ರಿಜಿಸ್ಟರ್ಡ್ ಹಾಗೂ ಸ್ಪೀಡ್ ಪೋಸ್ಟ್‌ಗಳ ಬುಕ್ಕಿಂಗ್ ಅವಧಿಯನ್ನು ಸಂಜೆ 6 ರಿಂದ ರಾತ್ರಿ 11 ಗಂಟೆಯವರೆಗೆ ಸಾರ್ವಜನಿಕರ ಅನುಕೂಲಕ್ಕಾಗಿ ವಿಸ್ತರಿಸಲಾಗಿದೆ.

ಪ್ರಮುಖ ಸುದ್ದಿ

# ವಿಶೇಷಚೇತನರು ಸಮಾಜದ ಮುಖ್ಯವಾಹಿನಿಗೆ ಬರಬೇಕು

» ಚಿತ್ರದುರ್ಗ

ವಿಶೇಷಚೇತನರು ಮುಖ್ಯವಾಗಿ ತಮ್ಮ ಸಾಮರ್ಥ್ಯಮೇಲೆ ನಂಬಿಕೆ ಇಡಬೇಕು. ತಮ್ಮ ಸಾಮರ್ಥ್ಯಕ್ಕನುಗುಣವಾಗಿ ಪ್ರಯತ್ನ ಮಾಡುವ ಮೂಲಕ ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ಶಾಸಕ ಟಿ. ರಘುಮೂರ್ತಿ ಸಲಹೆ ನೀಡಿದರು.

ನಗರದ ತರಾಸು ರಂಗಮಂದಿರದಲ್ಲಿ ಲೋಹಿಸ್ ಬೈಲ್ ಮೆಮೋರಿಯಲ್ ಚಾರಿಟೇಬಲ್ ಟ್ರಸ್ಟ್, ಚಿತ್ರದುರ್ಗ ಜಿಲ್ಲೆಯ ಎಲ್ಲಾ ವಿಶೇಷ ಚೇತನರ ಸಂಘ ಸಂಸ್ಥೆ ಒಕ್ಕೂಟಗಳು, ವಿಆರ್ ಡಬ್ಲ್ಯೂ, ಯುಆರ್ ಡಬ್ಲ್ಯೂ, ಎಂಆರ್ ಡಬ್ಲ್ಯೂ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ವಿಕಲಚೇತನರು ತಮ್ಮ ಹಕ್ಕುಗಳು, ಅವಕಾಶಗಳನ್ನು ಅರ್ಥಮಾಡಿಕೊಂಡು, ಬಳಸಿಕೊಂಡು ತಾವು ಸಾಮಾನ್ಯರಂತೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂಬ ಉದ್ದೇಶದಿಂದ ವಿಕಲಚೇತನರ ದಿನ ಆಚರಣೆ ಮಾಡಲಾಗುತ್ತಿದೆ.ಸಮಾಜದಲ್ಲಿ ಎಲ್ಲಾರಂತೆ ಬದುಕು ಅವಕಾಶ ಇದ್ದು ಸರ್ಕಾರದ ಸೌಲಭ್ಯ ಪಡೆದುಕೊಂಡು ತಮ್ಮ ಬದುಕು ಕಟ್ಟಿಕೊಳ್ಳಬೇಕು. ವಿಕಲಚೇತನರ ಕಲ್ಯಾಣಕ್ಕಾಗಿ ಪ್ರತ್ಯೇಕವಾಗಿ ಇಲಾಖೆಯನ್ನು ಸ್ಥಾಪಿಸಲಾಗಿದ್ದು, ವಿಕಲಚೇತನರನ್ನು ಮುಖ್ಯವಾಹಿನಿಗೆ ತರುವನಿಟ್ಟಿನಲ್ಲಿ ರಾಜ್ಯ ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ.

ತಾವುಗಳು ಉಚಿತ ಬಸ್ ಪಾಸ್ ನೀಡಲು ಮನವಿ ಮಾಡಿದ್ದಿರ ಇದನ್ನು ಸರ್ಕಾರದ ಜೊತೆ ಚರ್ಚೆ ನಡೆಸಲಾಗುತ್ತದೆ. ನನ್ನ ಕ್ಷೇತ್ರದಲ್ಲಿ ಕಳೆದ ವರ್ಷ ವಿಕಲಚೇತನರಿಗೆ 100ಕ್ಕೂಹೆಚ್ಚುವಿಕಲಚೇತನಯಂತ್ರಚಾಲಿತ ದ್ವಿಚಕ್ರವಾಹನ ವಿತರಣೆ ಮಾಡಲಾಗಿದ್ದು ಅವುಗಳನ್ನು ಪಡೆದುಕೊಂಡು ಅನೇಕರು ಬದುಕು ಕಂಡುಕೊಂಡಿದ್ದು ಮುಂದಿನ ದಿನಗಳಲ್ಲಿ ಸಹ ಸರ್ಕಾದ ಜೊತೆ ನಿಮ್ಮ ಸಮಸ್ಯೆಗಳನ್ನು ತಂದು ನ್ಯಾಯ ಒದಗಿಸುವ ಕೆಲಸ ಮಾಡಲಾಗುತ್ತದೆ ಎಂದು ಹೇಳಿದರು.

ಪ್ರಭಾರ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಎಂ.ವಿ.ವೀಣಾ ಮಾತನಾಡಿ, ಸಾಮಾನ್ಯರಂತೆ ಜೀವಿಸಲು ಅನುಕೂಲವಾಗುವಂತೆ ಎಲ್ಲಾ ರೀತಿಯ ಅಡೆತಡೆರಹಿತ ಸೌಲಭ್ಯ, ನೆರವು ನೀಡುವುದು ಸರ್ಕಾರದ ಹಾಗೂ ಸಮುದಾಯದ ಜವಾಬ್ದಾರಿ ಎಂದರು.

ವಿಕಲಚೇತನರಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ಮೂಲಕ ಸೌಲಭ್ಯಗಳನ್ನು ಒದಗಿಸಿ ಎಲ್ಲಾ ವಿಕಲಚೇತನರು ಮುಖ್ಯವಾಹಿನಿಗೆ ಬರುವಲ್ಲಿ ಹಲವಾರು ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ. ವಿಕಲಚೇತನರು ವಿವಿಧ ಸೌಲಭ್ಯಗಳನ್ನು ಪಡೆದು ತಮ್ಮ ಜೀವನ ರೂಪಿಸಿಕೊಳ್ಳಲು ಅವಕಾಶವಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕ ಮಲ್ಲಿಕಾರ್ಜುನ್, ಸಮಾಜ ಸೇವಕರಾದ ಸುರೇಶ್ ಬಾಬು, ಮುಖಂಡರಾದ ರಂಗಪ್ಪ ದಾಸರ್, ಪಾಪಯ್ಯ, ಆನಂದ್, ಜಾಕೀರ್ ಹುಸೇನ್, ಮುಜೀಬ್ ಮತ್ತಿತರರು ಇದ್ದರು.

## ಫಾಸ್ಟ್ ನ್ಯೂಸ್

### ಭಾರತೀಯ ರೆಡ್‌ಕ್ರಾಸ್: ಚಿತ್ರದುರ್ಗ ಜಿಲ್ಲಾ ಶಾಖೆಗೆ ಬೆಸ್ಟ್ ಡಿಸ್ಟಿಕ್ಟ್ ಅವಾರ್ಡ್



» **ಚಿತ್ರದುರ್ಗ**

ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಚಿತ್ರದುರ್ಗ ಜಿಲ್ಲಾ ಶಾಖೆ 2020–21ರಲ್ಲಿ ಕೋವಿಡ್ ಸಮಯದಲ್ಲಿ ಮಾಡಿದ ಅತ್ಯುತ್ತಮ ಸೇವೆ ಪರಿಗಣಿಸಿ, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ರಾಜ್ಯ ಶಾಖೆಯು ಚಿತ್ರದುರ್ಗ ಜಿಲ್ಲಾ ಶಾಖೆಗೆ "ಬೆಸ್ಟ್ ಡಿಸ್ಟಿಕ್ಟ್ ಅವಾರ್ಡ್" ನೀಡಿದೆ. ಬೆಂಗಳೂರಿನ ರಾಜ ಭವನದಲ್ಲಿ ಮಂಗಳವಾರ ನಡೆದ ಕರ್ನಾಟಕ ರೆಡ್ ಕ್ರಾಸ್ ಸಂಸ್ಥೆ ವಾರ್ಷಿಕ ಮಹಾಸಭೆಯಲ್ಲಿ ರಾಜ್ಯಪಾಲರು ಮತ್ತು ಭಾರತೀಯ ರೆಡ್ ಕ್ರಾಸ್ ಸಂಸ್ಥೆ ರಾಜ್ಯ ಶಾಖೆಯ ಅಧ್ಯಕ್ಷರಾದ ಥಾವರಚಂದ್ ಗೆಹಲೋಟ್ ಅವರು ಚಿತ್ರದುರ್ಗ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ರೆಡ್ ಕ್ರಾಸ್ ಸಂಸ್ಥೆಯ ಅಧ್ಯಕ್ಷರಾದ ದಿವ್ಯಪ್ರಭು ಜಿ.ಆರ್.ಜೆ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಿದರು. ಈ ಸಂದರ್ಭದಲ್ಲಿ ಭಾರತೀಯ ರೆಡ್‌ಕ್ರಾಸ್ ಚಿತ್ರದುರ್ಗ ಜಿಲ್ಲಾ ಶಾಖೆಯ ಕಾರ್ಯದರ್ಶಿ ಮಜಹರ್ ಉಲ್ಲಾ, ಖಜಾಂಚಿ ಅರುಣ್ ಕುಮಾರ್, ರಾಜ್ಯ ಆಡಳಿತ ಮಂಡಳಿ ಸದಸ್ಯ ಮಧು ಪ್ರಸಾದ್, ಮಾಜಿ ಸದಸ್ಯೆ ಗಾಯತ್ರಿ ಶಿವರಾಂ, ಗಿರೀಶ್ ಉಪಸ್ಥಿತರಿದ್ದರು.

### ಬಾಲಕಾರ್ಮಿಕರ ಪತ್ತೆಗೆ ಹೋಬಳಿವಾರು ಟಾಸ್ಕ್‌ಪೋರ್ಸ್ ಸಮಿತಿ



» **ಚಿತ್ರದುರ್ಗ**

ಬಾಲ ಕಾರ್ಮಿಕರನ್ನು ಪತ್ತೆ ಹಚ್ಚುವ ಸಲುವಾಗಿ ಹೋಬಳಿವಾರು ಟಾಸ್ಕ್ ಫೋರ್ಸ್ ಸಮಿತಿ ರಚಿಸಲಾಗಿದ್ದು, ಅಧಿಕಾರಿಗಳು ತಿಂಗಳಿಗೊಂದು ದಿನ ಬಾಲ ಕಾರ್ಮಿಕರ ಅನಿರೀಕ್ಷಿತ ದಾಳಿ ಕೈಗೊಳ್ಳಬೇಕು ಎಂದು ಚಳ್ಳಕೆರೆ ತಹಶೀಲ್ದಾರ್ ರೆಹಮಾನ್ ಪಾಷಾ ಹೇಳಿದರು. ಚ ಳ್ಳ ಕೆ ರೆ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಬುಧವಾರ ತಾಲ್ಲೂಕು ಬಾಲ ಕಾರ್ಮಿಕ ಪುನರ್ವಸತಿ ಸಮಿತಿ ಹಾಗೂ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಹೋಬಳಿವಾರು ತಂಡದ ವ್ಯಾಪ್ತಿಯಲ್ಲಿ ಬರುವ, ಬಾರ್, ರೆಸ್ಟೋರೆಂಟ್, ಗ್ಯಾರೇಜ್, ಕಟ್ಟಡ ನಿರ್ಮಾಣ, ಪೌಲ್ಟ್ರಿ ಫಾರ್ಮ್. ನಲ್ಲಿ ಅನಿರೀಕ್ಷಿತ ದಾಳಿಯನ್ನು ನಡೆಸಿ ಬಾಲ ಕಾರ್ಮಿಕ ಮಕ್ಕಳು ಕಂಡುಬಂದರೆ ತಕ್ಷಣ ತಪ್ಪಿತಸ್ಥ ಮಾಲೀಕರ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು. ಸಭೆಯಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳಾದ ಚಳ್ಳಕೆರೆ ತಾಲ್ಲೂಕು ಕಾರ್ಮಿಕ ನಿರೀಕ್ಷಕಿ ಟಿ.ಕುಸುಮ, ಸಹಾಯಕ ಕೃಷಿ ಅಧಿಕಾರಿ ಹೆಚ್.ಮೇಘನಾ, ಪಶುಪಾಲನಾ ಇಲಾಖೆ ಸಹಾಯಕ ನಿರ್ದೇಶಕ ಡಾ.ಟಿ.ಎಸ್.ರೇವಣ್ಣ, ಜೂನಿಯರ್ ಇಂಜಿನಿಯರ್ ಜಿ.ಕೆ.ಮೋಹನ್, ಸಿಡಿಪಿಒ ಕಚೇರಿಯ ಅನ್ನಪೂರ್ಣ, ಬಿಇಒ ಕಚೇರಿಯ ಟಿಪಿಇಒ ಸುನಿಲ್ ನಾಯಕ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸುನಿಲ್ ಕುಮಾರ್, ಸಹಾಯಕ ರೇಷ್ಮೆ ವಿಸ್ತರಣಾಧಿಕಾರಿ ಡಿ.ಮೋಹನ್, ಬಾಲ ಕಾರ್ಮಿಕ ಯೋಜನೆ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

### ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಆಹ್ವಾನ

» **ದಾವಣಗೆರೆ**

ಹೆಚ್.ಎ.ಎಲ್ ಬೆಂಗಳೂರು ಇವರು ಐ.ಟಿ.ಐ. (ಫಿಟ್ಟರ್, ಟರ್ನರ್, ಮೆಷಿನಿಸ್ಟ್, ವೆಲ್ಡರ್, ಅಔಕಂ, ಫೌಂಡ್ರಿಮನ್, ಶೀಟ್ ಮೆಟಲ್ ವರ್ಕರ್, ಕಾರ್ಪೆಂಟರ್, ಮೆಕಾನಿಕ್ ಆರ್&ಎಸಿ, ಟೂಲ್ ಆ್ಯಂಡ್ ಡೈ ಮೇಕರ್ ಮತ್ತು ಅಡ್ವಾನ್ಸ್ ಸಿಎನ್‌ಸಿ ಮಿಷಿನಿಂಗ್) ತೇರ್ಗಡೆ ಹೊಂದಿದ ಅಭ್ಯರ್ಥಿಗಳಿಂದ ಅಪ್ರೆಂಟೀಸ್ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆಯನ್ನು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ದಾವಣಗೆರೆ ಇಲ್ಲಿ ಅಥವಾ ಆನ್‌ಲೈನ್ ಮೂಲಕ ಪಡೆದುಕೊಂಡು, www.apprenticeshipindia.org/candidate-registration ಈ ವೆಬ್‌ಸೈಟ್‌ನಲ್ಲಿ ನೋಂದಾಯಿಸಿ, ನೋಂದಣಿ ಸಂಖ್ಯೆಯನ್ನು ಅರ್ಜಿಯಲ್ಲಿ ನಮೂದಿಸಿ, ಅರ್ಜಿ ಸಲ್ಲಿಸಬಹುದಾಗಿದೆ . ಅರ್ಜಿ ಸಲ್ಲಿಸುವ ಕೊನೆಯ ಡಿ.30 ಕೊನೆಯ ದಿನ. ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿದೂರವಾಣಿ ಸಂಖ್ಯೆ: 08192–259446ಇವರುಗಳನ್ನು ಸಂಪರ್ಕಿಸಿ.

# ಡಿ.27ರಿಂದ ಕುಷ್ಠರೋಗ ಪತ್ತೆ ಅಭಿಯಾನ

## ಕುಷ್ಠ ರೋಗ ಮುಕ್ತ ಜಿಲ್ಲೆಗೆ ಪಣತೊಡಿ –ಶೇ.100 ರಷ್ಟು ಸಮೀಕ್ಷೆ ಕಾರ್ಯ ಪೂರ್ಣಗೊಳಿಸಿ: ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

» **ಚಿತ್ರದುರ್ಗ**

ಪೋಲಿಯೋ ರೋಗದ ಹಾಗೇ ಕುಷ್ಠರೋಗವನ್ನು ಸಹ ದೇಶದಿಂದ ನಿರ್ಮೂಲನೆ ಮಾಡಬೇಕು. 'ಕುಷ್ಠ ರೋಗ ಮುಕ್ತ ಚಿತ್ರದುರ್ಗ ಜಿಲ್ಲೆ' ಎನ್ನುವ ಘೋಷ ವಾಕ್ಯದೊಂದಿಗೆ ಡಿ.27 ರಿಂದ ಜ.11 ವರೆಗೆ ನಡೆಯುವ ಕುಷ್ಠರೋಗ ಪತ್ತೆ ಹಚ್ಚುವ ಅಭಿಯಾನದಲ್ಲಿ ನಿಖರ ತಪಾಸಣೆ ನಡೆಸಿ, ಶೇ.100 ರಷ್ಟು ಸಮೀಕ್ಷೆ ಕಾರ್ಯ ಪೂರ್ಣಗೊಳಿಸಿ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಸೂಚನೆ ನೀಡಿದರು.

ಈ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕುಷ್ಠ ರೋಗದ ಲಕ್ಷಣ, ಸ್ವರೂಪದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು. ಶಾಲೆ ಹಾಗೂ ಹಾಸ್ಟೆಲ್‌ಗಳಲ್ಲಿ ಮಕ್ಕಳ ತಪಾಸಣೆ ಕೈಗೊಳ್ಳುವುದರ ಮೂಲಕ ಅರಿವು ಮೂಡಿಸಬೇಕು. ಕೊಳಚೆ ಪ್ರದೇಶಗಳು ಹಾಗೂ ಈ ಹಿಂದೆ ಕುಷ್ಠ ರೋಗ ಪತ್ತೆಯಾದ ಏರಿಯಾಗಳಲ್ಲಿ ಹೆಚ್ಚಿನ ತಪಾಸಣೆ ಕಾರ್ಯ ನಡೆಸಬೇಕು. ತಾಯಂದಿರು ಹಾಗೂ ಗರ್ಭಿಣಿಯರಿಗೂ ಈ ಕುರಿತು ಮಾಹಿತಿ ನೀಡಬೇಕು. ಆರೋಗ್ಯವಂತ ಸಮಾಜ ನಿರ್ಮಾಣ ಮಾಡಲು ಎಲ್ಲರ ಸಹಕಾರ ಬೇಕು, ಈ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಸಾರ್ವಜನಿಕರು ಈ ವಿಶೇಷ ಅಭಿಯಾನದ ಯಶಸ್ವಿಗೆ ಕೈಜೋಡಿಸಬೇಕು ಎಂದರು.



ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆ: ಅಭಿಯಾನವನ್ನು ಯಶಸ್ವಿಗೊಳಿಸುವ ಹಿನ್ನಲೆಯಲ್ಲಿ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್, ತಾ.ಪಂ. ಇಓ ಹಾಗೂ ತಾಲ್ಲೂಕು ಆರೋಗ್ಯ ಅಧಿಕಾರಿಗಳ ನೇತೃತ್ವದಲ್ಲಿ ಅಂತರ್ ಇಲಾಖೆಗಳ ಸಭೆ ನಡೆಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಗ್ರಾಮ ಹಾಗೂ ವಾರ್ಡ್‌ವಾರು ಸಮೀಕ್ಷೆ ಕಾರ್ಯ ನಡೆಸಿ, ತಪಾಸಣೆ ನಿಖರವಾಗಿರಬೇಕು, ಅಲ್ಲದೆ ಈ ಬಗ್ಗೆ ದತ್ತಾಂಶವನ್ನು ಸಂಗ್ರಹಿಸಬೇಕು. ನಗರಸಭೆ, ಪಟ್ಟಣ ಪಂಚಾಯಿತಿ ಹಾಗೂ ಗ್ರಾಮ ಪಂಚಾಯತಿ ಕಸ ಸಂಗ್ರಹಿಸುವ ವಾಹನಗಳಲ್ಲಿ ಅಭಿಯಾನದ ಕುರಿತು ಮಾಹಿತಿಯನ್ನು ಧ್ವನಿವರ್ಧಕದ ಮೂಲಕ ಪ್ರಚಾರ ಮಾಡಬೇಕು. ಬಹಳಷ್ಟು ಜನರು ಕುಷ್ಠರೋಗದ ಬಗ್ಗೆ ಕೀಳರಿಮೆ, ಮಾಹಿತಿಯ ಕೊರತೆ ಹಾಗೂ ಮೂಢನಂಬಿಕೆ ಹೊಂದಿ, ವೈದ್ಯರ ಬಳಿ ಬಾರದೆ ಜೀವಕ್ಕೆ ಕುತ್ತು ತಂದುಕೊಳ್ಳುತ್ತಾರೆ. ಕೆಲವು ಘಟನೆಗಳಲ್ಲಿ ಶಾಶ್ವತ ಅಂಗವೈಕಲ್ಯವು ಉಂಟಾಗಬಹುದು. ಇದಕ್ಕೆ ಅವಕಾಶ ಕೊಡದೆ, ಕುಷ್ಠರೋಗವು ಸಂಪೂರ್ಣ ಗುಣಮುಖವಾಗುವ ಖಾಯಿಲೆಯಾಗಿದೆ ಎಂಬುದನ್ನು ಜನರಿಗೆ ತಿಳಿಯ ಪಡಿಸಬೇಕು. ಸರ್ಕಾರ ಉಚಿತವಾಗಿ ಔಷದೋಪಚಾರಗಳನ್ನು ನೀಡುವುದು. ಆರಂಭದಲ್ಲಿಯೇ ಚಿಕಿತ್ಸೆ ಪಡೆದರೆ ಕುಷ್ಠರೋಗದಿಂದ ಮುಕ್ತಿ ಹೊಂದಬಹುದು ಎಂಬುದನ್ನು ಮನವರಿಕೆ ಮಾಡಿಕೊಡುವಂತೆ ಅವರು ಹೇಳಿದರು.

ಜಿಲ್ಲೆಯಲ್ಲಿ 61 ಕುಷ್ಠರೋಗ ಪ್ರಕರಣ: ಚಿತ್ರದುರ್ಗ ಜಿಲ್ಲೆಯಲ್ಲಿ ಸದ್ಯ 61 ಕುಷ್ಠರೋಗ ಪ್ರಕರಣಗಳು ಇವೆ. ಇದರಲ್ಲಿ ಚಳ್ಳಕೆರೆ ತಾಲ್ಲೂಕಿನಲ್ಲಿ ಗರಿಷ್ಠ 29 ಪ್ರಕರಣಗಳು ಪತ್ತೆಯಾಗಿವೆ. ಚಿತ್ರದುರ್ಗ ತಾಲ್ಲೂಕು 14, ಮೊಳಕಾಲ್ಮೂರು 8, ಹೊಳಲ್ಕರೆ 7, ಹಿರಿಯೂರು ತಾಲ್ಲೂಕಿನಲ್ಲಿ 3 ಪ್ರಕರಣಗಳಿವೆ. ಹೊಸದುರ್ಗದಲ್ಲಿ ಯಾವುದೇ ಪ್ರಕರಣಗಳು ಪತ್ತೆಯಾಗಿಲ್ಲ. ಪ್ರತಿ 10 ಸಾವಿರ ಜನಸಂಖ್ಯೆಗೆ ಜಿಲ್ಲಾ ಅನುಪಾತ 0.34 ಇದ್ದು, ಚಳ್ಳಕೆರೆ ತಾಲ್ಲೂಕಿನಲ್ಲಿ 0.72 ಹಾಗೂ ಮೊಳಕಾಲ್ಮೂರು ತಾಲ್ಲೂಕಿನಲ್ಲಿ 0.51 ಇದೆ. ಡಿ.27 ರಿಂದ ಜ.11ರ ವರೆಗೆ ಒಟ್ಟು 14 ದಿನಗಳ ಕಾಲ ಕುಷ್ಠರೋಗ ಪತ್ತೆ ಅಭಿಯಾನ ಜರುಗಲಿದ್ದು, 1469 ತಂಡಗಳನ್ನು ರಚಿಸಲಾಗಿದೆ. ಈ ತಂಡಗಳಿಗೆ ಈಗಾಗಲೇ ತರಬೇತಿಯನ್ನು ನೀಡಲಾಗಿದ್ದು, ಪ್ರತಿ ದಿನ ಬೆಳಿಗ್ಗೆ 7 ರಿಂದ 11 ಗಂಟೆಯವರೆಗೆ ಸರ್ವೆ ಕೈಗೊಳ್ಳಲಿದ್ದಾರೆ. ಪ್ರತಿ ತಂಡದಲ್ಲೂ ಓರ್ವ ಆಶಾ ಕಾರ್ಯಕರ್ತೆ, ಓರ್ವ ಆರೋಗ್ಯ ಸಹಾಯಕರು ಇರಲಿದ್ದಾರೆ. ಇವರ ಮೇಲೆ ಮೇಲ್ವಿಚಾರಕರನ್ನು ನೇಮಿಸಲಾಗಿದೆ. ಪ್ರತಿ ಮನೆ ಮನೆಗೂ ತೆರಳಿ ಸರ್ವೆ ಕಾರ್ಯಕೈಗೊಳ್ಳಲಾಗುವುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ರೇಣುಪ್ರಸಾದ್ ಹಾಗೂ ಕಾರ್ಯಕ್ರಮ ಅನುಷ್ಠಾಧಿಕಾರಿ ಡಾ.ನಾಗರಾಜ ಸಭೆಯಲ್ಲಿ ಮಾಹಿತಿ ನೀಡಿದರು.ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಕಾಂತರಾಜ್, ಆರೋಗ್ಯ ಇಲಾಖೆಯ ಡಾ.ಸಿ.ಓ.ಸುಧಾ, ತಾಲ್ಲೂಕು ಆರೋಗ್ಯ ಅಧಿಕಾರಿ ಡಾ.ವಿ.ವಿ.ಗಿರೀಶ್, ಜಿಲ್ಲಾ ಆಸ್ಪತ್ರೆ ನಿವಾಸಿ ವೈದ್ಯಾಧಿಕಾರಿ ಡಾ.ಆನಂದ್ ಪ್ರಕಾಶ್, ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಅಭಿಯಾನದ ಪೋಸ್ಟರ್‌ಗಳನ್ನು ಬಿಡುಗಡೆ ಮಾಡಲಾಯಿತು.

# ಶೈಕ್ಷಣಿಕ ಪ್ರಗತಿ ಜೊತೆ ಕ್ರೀಡಾ ಮನೋಭಾವ ಬೆಳೆಸಿಕೊಳ್ಳಿ: ಶಾಸಕ ಟಿ.ರಘುಮೂರ್ತಿ ಕರೆ

» **ಚಿತ್ರದುರ್ಗ**

ಪೈಪೋಟಿ ಯುಗದಲ್ಲಿ ಮಕ್ಕಳು ಶೈಕ್ಷಣಿಕ ಪ್ರಗತಿ ಜೊತೆಗೆ ಕ್ರೀಡೆಯೂ ಮುಖ್ಯವಾಗಿದ್ದು ಮಕ್ಕಳು ಕ್ರೀಡೆಯಲ್ಲಿ ಹೆಚ್ಚು ಹೆಚ್ಚು ಪಾಲ್ಗೊಳ್ಳಲು ಅಣಿಯಾಗಬೇಕು ಎಂದು ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಕ್ರೀಡಾಪಟುಗಳಿಗೆ ಕರೆ ನೀಡಿದರು.

ದಾವಣಗೆರೆ ವಿಶ್ವವಿದ್ಯಾನಿಲಯ ದೈಹಿಕ ಶಿಕ್ಷಣ ನಿರ್ದೇಶಕರ ಸಂಘ, ಹೆಚ್.ಪಿ.ಸಿ.ಸಿ. ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಚಳ್ಳಕೆರೆ ಇವರುಗಳ ಸಹಯೋಗದೊಂದಿಗೆ ವೀರವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಮೂರು ದಿನಗಳ ಕಾಲ ನಡೆದ ದಾವಣಗೆರೆ ವಿಶ್ವವಿದ್ಯಾನಿಲಯ ಅಂತರ ಕಾಲೇಜುಗಳ ಪುರುಷರ ಮತ್ತು ಮಹಿಳೆಯರ 12 ನೇ ಅಥ್ಲೆಟಿಕ್ಸ್ ಕ್ರೀಡಾಕೂಟ ಹಾಗೂ ವಿ.ವಿ. ತಂಡದ ಆಯ್ಕೆ 2023–24 ನೇ ಸಾಲಿನ ಮುಕ್ತಾಯ ಸಮಾರಂಭದಲ್ಲಿ ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿದರು.

ಕಳೆದ ಮೂರು ದಿನಗಳ ಕಾಲ ನಡೆದ ಕ್ರೀಡಾಕೂಟದಲ್ಲಿ ಒಟ್ಟು 134 ಕಾಲೇಜುಗಳಿಂದ 800 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಕ್ರೀಡಾಕೂಟದಲ್ಲಿ ಪಾಲ್ಗೊಂಡಿರುವುದು ಸಂತೋಷದ ಸಂಗತಿ. ವಿದ್ಯಾರ್ಥಿಗಳು ತಮ್ಮ ಅಧ್ಯಯನದ ಜೊತೆ ಜೊತೆಯಲ್ಲಿ ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕು. ತಮ್ಮ ಸ್ಪರ್ಧೆಯಲ್ಲಿ ಸೋಲು–ಗೆಲುವು ಸಮಾನವಾಗಿ ಸ್ವೀಕರಿಸಬೇಕು. ಮಕ್ಕಳು ಮೊದಲು ಕ್ರೀಡೆಯಲ್ಲಿ ಪಾಲ್ಗೊಳ್ಳುವುದನ್ನು ಕಲಿಯಬೇಕು ಎಂದರುಸರ್ಕಾರದಿಂದ ಕ್ರೀಡಾ ಕೋಟಾದಲ್ಲಿ ಸರ್ಕಾರಿ ಕೆಲಸಕ್ಕೂ ಸಹ ತಾವುಗಳು ಹೋಗಬಹುದು. ನಮ್ಮ ಜಿಲ್ಲೆಯವರು ಶಿಕ್ಷಕರುಗಳು ಶ್ರಮಿಸಬೇಕು. ಕಲಿಕೆಯಷ್ಟೆ ಶ್ರದ್ಧೆಯಿಂದ ಕ್ರೀಡೆಯಲ್ಲಿ ತರಬೇತಿ ಪಡೆದರೆ ಯಶಸ್ಸು ಸಾಧ್ಯವಾಗುತ್ತದೆ. ಚಳ್ಳಕೆರೆ ಕಾಲೇಜಿನ ಸಹಯೋಗದಲ್ಲಿ ಯಶಸ್ವಿಯಾಗಿ ನಡೆದಿದೆ. ಎಲ್ಲಾರೂ ಸಹ ನಮ್ಮ ಮಕ್ಕಳು ಸೋತವರು ಗೆದ್ದವರು ಇಬ್ಬರು ಮುಂದಿನ ಹಂತಕ್ಕೆ ಹೋಗಲು ತರಬೇತಿ ಪಡೆಯಬೇಕು ಎಂದು ಹೇಳಿದರು. ಚಳ್ಳಕೆರೆ ಹೆಚ್.ಪಿ.ಸಿ.ಸಿ. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯರಾದ ಡಾ.ಆರ್.ರಂಗಪ್ಪ ಮಾತನಾಡಿ ವ್ಯಕ್ತಿತ್ವ ವಿಕಸನಕ್ಕೆ ಕ್ರೀಡೆ ಮುಖ್ಯ. ವಿದ್ಯಾರ್ಥಿಗಳುಮೊಬೈ[illegible]ನಲ್ಲಿತಲ್ಲೀನರಾಗುವುದೇ ಕ್ರೀಡೆ ಎಂದುಕೊಂಡಿರುವುದರಿಂದ ಕ್ರೀಡಾ ಮನೋಭಾವ ಕಡಿಮೆಯಾಗುತ್ತಿದೆ. ಮಾನಸಿಕ ಹಾಗೂ ದೈಹಿಕ ಸದೃಢತೆಗೆ ಕ್ರೀಡೆ ಸಹಕಾರಿಯಾಗಲಿದೆ ಎಂದು ತಿಳಿಸಿದರು.





ಪುರುಷರ ವಿಭಾಗದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದಾವಣಗೆರೆ ಚಾಂಪಿಯನ್ ಪ್ರಶಸ್ತಿಯನ್ನು ಪಡೆದುಕೊಂಡಿತು. ಮಹಿಳೆಯರ ವಿಭಾಗದಲ್ಲಿ ಹೊನ್ನಾಳಿಯ ಎಸ್.ಎಂ.ಎಸ್. ಪ್ರಥಮ ದರ್ಜೆ ಕಾಲೇಜು ಚಾಂಪಿಯನ್ ಆಗಿ ಹೊರಹೊಮ್ಮಿತು. ಸಮಗ್ರ ಚಾಂಪಿಯನ್ ಪ್ರಶಸ್ತಿಯನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದಾವಣಗೆರೆ ತಂಡ ತನ್ನದಾಗಿಸಿಕೊಂಡಿತು.

ದಾವಣಗೆರೆ ವಿಶ್ವವಿದ್ಯಾನಿಲಯ ದೈಹಿಕ ಶಿಕ್ಷಣ ವಿಭಾಗದ ಕ್ರೀಡಾಧಿಕಾರಿ ಡಾ.ವೀರಪ್ಪ, ಕ್ರೀಡಾಕೂಟದ ಕಾರ್ಯದರ್ಶಿ ಹೆಚ್.ತಿಪ್ಪೇಸ್ವಾಮಿ, ರಾಷ್ಟ್ರ ಮಟ್ಟದ ತೀರ್ಪುಗಾರ ಅರುಣ್, ಅನಿ[illegible]ಕುಮಾರ್, ಗಂಗಾಧರ್, ಡಾ.ವೀರೇಂದ್ರ, ಡಾ.ಪಾಪಣ್ಣ, ರಘುನಾಥ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಾಬುರೆಡ್ಡಿ, ಇತಿಹಾಸ ಉಪನ್ಯಾಸಕಿ ಜಯಮ್ಮ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ವಿದ್ಯುತ್ ಸುರಕ್ಷತಾ ಜಾಗೃತಿ ಜಾಥಾಕ್ಕೆ ಚಾಲನೆ



» **ಚಿತ್ರದುರ್ಗ**

ವಿದ್ಯುತ್ ಅಪಘಾತ ತಡೆ ಸಪ್ತಾಹದ ಅಂಗವಾಗಿ ಬೆಸ್ಕಾಂ ಚಿತ್ರದುರ್ಗ ವಿಭಾಗದಿಂದ ಮಂಗಳವಾರ ವಿದ್ಯುತ್ ಸುರಕ್ಷಣಾ ಜಾಗೃತಿ ಜಾಥಾವನ್ನು ಚಿತ್ರದುರ್ಗ ನಗರದಲ್ಲಿ ನಡೆಸಲಾಯಿತು. ನಗರದ ಹೊಳಲ್ಕೆರೆ ರಸ್ತೆಯ ಕನಕ ಸರ್ಕಲ್ ಬಳಿ ಬೆಸ್ಕಾಂ ಕಾರ್ಯನಿರ್ವಾಹಕ ಇಂಜಿನಿಯರ್ ಡಿ.ಜಯಣ್ಣ ವಿದ್ಯುತ್ ಸುರಕ್ಷಣಾ ಜನ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿದರು.ಈ ವೇಳೆ ಮಾತನಾಡಿದ ಬೆಸ್ಕಾಂ ಕಾರ್ಯನಿರ್ವಾಹಕ ಇಂಜಿನಿಯರ್ ಡಿ.ಜಯಣ್ಣ, ಸಾರ್ವಜನಿಕರು, ರೈತರು, ಶಾಲಾ ಮಕ್ಕಳು ಹಾಗೂ ಬೆಸ್ಕಾಂ ಸಿಬ್ಬಂದಿಗೆ ವಿದ್ಯುತ್ ಅಪಘಾತ ತಡೆಯುವ ಸಲುವಾಗಿ ಅರಿವು ಮೂಡಿಸಲು ಜಾಥಾ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ವಿದ್ಯುತ್ ಅಪಘಾತ ಉಂಟಾಗದಂತೆ ಹೇಗೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಬೆಸ್ಕಾಂ ಮುಂದಾಗಿದೆ. ಅಪಘಾತಗಳನ್ನು ತಡೆಗಟ್ಟುವ ಸಲುವಾಗಿ ಸುರಕ್ಷಣಾ ಜಾಥಾ ನಡೆಸಿ ಜನರಲ್ಲಿ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.

ವಿದ್ಯುತ್ ಅಪಘಾತ ಹಾಗೂ ತುರ್ತು ಸಂದರ್ಭದಲ್ಲಿ ದೂರವಾಣಿ ಸಂಖ್ಯೆ 1912 ಕರೆ ಮಾಡಿ ಮಾಹಿತಿ ನೀಡಬಹುದು. ಚಿತ್ರದುರ್ಗ ವಿಭಾಗದ ವ್ಯಾಪ್ತಿಯಲ್ಲಿನ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಚಿತ್ರಕಲೆ, ಪ್ರಬಂಧ, ಚರ್ಚಾ ಸ್ಪರ್ಧೆಗಳನ್ನು ಆಯೋಜಿಸಿ ವಿದ್ಯುತ್ ಅಪಘಾತಗಳ ಕುರಿತು ಜಾಗೃತಿ ಮೂಡಿಸುವ ಕೆಲಸ ಮಾಡಲಾಗುತ್ತಿದೆ. ವಿದ್ಯುತ್ ಅಪಘಾತ ತಡೆಯುವ ಸಲುವಾಗಿ ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿದರು. ನಂತರ ಬೆಸ್ಕಾಂ ಸಿಬ್ಬಂದಿಗೆ ಸುರಕ್ಷಾ ಕ್ರಮಗಳನ್ನು ಕೈಗೊಳ್ಳುವ ಕುರಿತು ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು.

ನಗರದ ಹೊಳಲ್ಕೆರೆ ರಸ್ತೆಯ ಕನಕ ಸರ್ಕಲ್‌ನಿಂದ ಆರಂಭವಾದ ಜನ ಜಾಗೃತಿ ಜಾಥಾವು, ಗಾಂಧಿ ಸರ್ಕಲ್, ತಾಲ್ಲೂಕು ಕಚೇರಿ, ಜೆ.ಸಿ.ಆರ್ ಬಡಾವಣೆ ಮುಖಾಂತರ ಆರ್.ಟಿ.ಓ ಕಚೇರಿ ಬಳಿಯ ಕೆಇಬಿ ಸಮುದಾಯ ಭವನ ತಲುಪಿತು.

## ಪ್ರಮುಖ ಸುದ್ದಿ

# ಕೋವಿಡ್ ಜೆಎನ್1ವರದಿ, ಭಯ ಬೇಡ, ಎಚ್ಚರಿಕೆ ಅಗತ್ಯ

» **ದಾವಣಗೆರೆ**

ನೆರೆರಾಜ್ಯಗಳಾದ ಕೇರಳ, ತಮಿಳುನಾಡಿನಲ್ಲಿ ಕೋವಿಡ್‌ನ ರೂಪಾಂತರ ತಳಿಯಾಗಿರುವ ಜೆಎನ್–1 ವರದಿಯಾಗಿದ್ದು ರಾಜ್ಯದಲ್ಲಿ ಮುಂಜಾಗ್ರತಾ ಕ್ರಮ ಕೈಗೊಳ್ಳಲು ಮತ್ತು ತಾಂತ್ರಿಕ ಸಲಹಾ ಸಮಿತಿಯ ಸಲಹೆಗಳನ್ನು ಪಾಲಿಸಲು ಸರ್ಕಾರದ ನಿರ್ದೇಶನದಂತೆ ಸಾರ್ವಜನಿಕರು ಆತಂಕಪಡದೆ ಎಲ್ಲಾ ಮುಂಜಾಗ್ರತಾ ಕ್ರಮ ಅನುಸರಿಸುವಂತೆ ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕೋವಿಡ್‌ನ ಮೊದಲ ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅಕ್ಕಪಕ್ಕದ ರಾಜ್ಯಗಳಲ್ಲಿ ಕೋವಿಡ್ ರೂಪಾಂಪರ ತಳಿಯ ವರದಿಯಾಗಿರುವುದರಿಂದ ರಾಜ್ಯದಲ್ಲಿ ಮುಂಜಾಗ್ರತೆ ವಹಿಸಬೇಕಾಗಿದೆ. ರಾಜ್ಯದಲ್ಲಿ 70 ಸಕ್ರಿಯ ಪ್ರಕರಣಗಳಿವೆ, ಆದರೆ ಸಾರ್ವಜನಿಕರು ಆತಂಕಪಡುವ ಅಗತ್ಯವಿರುವುದಿಲ್ಲ, ಆದರೆ ಮುನ್ನೆಚ್ಚರಿಕೆ ವಹಿಸುವುದು ಅಗತ್ಯವಾಗಿದೆ ಎಂದರು.

ಜ್ವರ, ಕೆಮ್ಮು, ನೆಗಡಿ, ಉಸಿರಾಟದ ಸೋಂಕಿನ ಲಕ್ಷಣಗಳಿರುವವರು ತಕ್ಷಣವೇ ವೈದ್ಯರನ್ನು ಭೇಟಿ ಮಾಡಿ ಚಿಕಿತ್ಸೆ ಪಡೆಯಬೇಕು.

ಮತ್ತು ಮೂಗು ಹಾಗೂ ಬಾಯಿ ಮುಚ್ಚುವಂತೆ ಮಾಸ್ಕ್ ಧರಿಸಬೇಕು. 60 ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರು ಮತ್ತು ಕಿಡ್ನಿ, ಹೃದಯ, ಲಿವರ್ ಸಮಸ್ಯೆಯಿಂದ ಬಳಲುತ್ತಿರುವವರು, ಗರ್ಭಿಣಿಯರು, ತಾಯಂದಿರು ಹೊರಾಂಗಣ ಪ್ರದೇಶಗಳಿಗೆ ತೆರಳಿದಾಗ ಮಾಸ್ಕ್ ಧರಿಸಬೇಕು. ಅಗತ್ಯ ಗಾಳಿ, ಬೆಳಕಿನ ವ್ಯವಸ್ಥೆಯಿಲ್ಲದ ಮತ್ತು ಹೆಚ್ಚು ಜನಸಂದಣಿಯಿರುವ ಪ್ರದೇಶಗಳಿಗೆ ತೆರಳದಂತೆ ಕ್ರಮ ವಹಿಸುವುದು ಅಗತ್ಯವಾಗಿದೆ ಎಂದರು.



ಆರೋಗ್ಯ ಸಮಸ್ಯೆ ಇರುವವರು ಮನೆಯಲ್ಲಿರುವುದು ಸೂಕ್ತವಾಗಿದ್ದು ಸಾಮಾಜಿಕ ಅಂತರ, ಮಾಸ್ಕ್ ಧರಿಸಿ ಸ್ವಯಂ ನಿಯಂತ್ರಣ ಹೊಂದುವ ಮೂಲಕ ಎಚ್ಚರಿಕೆ ವಹಿಸಬೇಕು. ಉತ್ತಮ ವೈಯಕ್ತಿಕ ಸ್ವಚ್ಛತೆ, ಆಗಾಗ್ಗೆ ಕೈಗಳನ್ನು ಸೋಪು ಹಾಗೂ ನೀರಿನಿಂದ ತೊಳೆದುಕೊಳ್ಳುವುದನ್ನು ಮಾಡಬೇಕು.

ಔಷಧ ದಾಸ್ತಾನು ಮಾಡಲು ಸೂಚನೆ; ಕೋವಿಡ್ ವರದಿಯ ಹಿನ್ನಲೆಯಲ್ಲಿ ಕೋವಿಡ್ ಚಿಕಿತ್ಸೆಗೆ ಬೇಕಾದ ಔಷಧಗಳ ದಾಸ್ತಾನು ಮಾಡಲು ಮತ್ತು ಆಸ್ಪತ್ರೆಗಳಲ್ಲಿ ಪ್ರತ್ಯೇಕ ಕೋವಿಡ್ ವಾರ್ಡ್‌ಗಳನ್ನು ಸಿದ್ದ ಮಾಡಿಟ್ಟುಕೊಂಡು ಚಿಕಿತ್ಸೆಗೆ ಬೇಕಾದ ಆಕ್ಸಿಜನ್, ವೆಂಟಿಲೇಟರ್‌ಗಳನ್ನು ಸಿ ದ್ದ ಮಾ ಡಿ ಕೊಂ ಡಿ ರ ಬೇ ಕು. ಕೋವಿಡ್ ಪತ್ತೆಗಾಗಿ ರ್‍ಯಾಪಿಡ್ ಕಿಟ್ ಮತ್ತು ಆರ್‌ಟಿಪಿಸಿಆರ್ ಲ್ಯಾಬ್‌ನ್ನು ಸಿದ್ದಮಾಡಿಕೊಳ್ಳಲು ಆರೋಗ್ಯಾಧಿಕಾರಿಗಳಿಗೆ ತಿಳಿಸಿ ಕೋವಿಡ್ ಚಿಕಿತ್ಸೆ ಬಗ್ಗೆ ವೈದ್ಯರು ಮತ್ತು ಇತರೆ ಸಿಬ್ಬಂದಿಗಳಿಗೆ ತರಬೇತಿ ಏರ್ಪಡಿಸಲು ತಿಳಿಸಿದರು. ಐಎಲ್‌ಐ, ಸಾರಿ ಪ್ರಕರಣ; ಡಿಸೆಂಬರ್ ಮತ್ತು ಜನವರಿ ತಿಂಗಳಲ್ಲಿ ಈ ಪ್ರಕರಣಗಳು ಹೆಚ್ಚಲಿದ್ದು ಆತಂಕಪಡುವ ಅಗತ್ಯವಿರುವುದಿಲ್ಲ, ಆದರೂ ಸಹ ಬಹಳ ಮುನ್ನೆಚ್ಚರಿಕೆ ವಹಿಸಬೇಕಾಗಿದೆ. ಇಂತಹ ಪ್ರಕರಣಗಳು ಕಂಡು ಬಂದಾಗ ಎಕ್ಸ್‌ರೇ ಮತ್ತು ಸಿಟಿ ಸ್ಕ್ಯಾನ್ ಮಾಡಿಸಲು ಕ್ರಮ ಕೈಗೊಳ್ಳಬೇಕೆಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಲೋಕೇಶ್ ಪಿ.ಎಲ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ; ಷಣ್ಮುಖಪ್ಪ, ಚಿಗಟೇರಿ ಆಸ್ಪತ್ರೆ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ; ನಾಗೇಂದ್ರಪ್ಪ, ಜಿಲ್ಲಾ ಸರ್ವಲೆನ್ಸ್ ಅಧಿಕಾರಿ ಡಾ; ರಾಘವನ್, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ; ರುದ್ರಸ್ವಾಮಿ, ಜಿಲ್ಲಾ ಕುಷ್ಟರೋಗ ನಿರ್ಮೂಲನಾಧಿಕಾರಿ ಡಾ; ಮಂಜುನಾಥ್ ಪಾಟೀಲ್, ಪಾಲಿಕೆ ಆಯುಕ್ತರಾದ ರೇಣುಕಾ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹಂತೇಶ್ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T